ಸಂಪುಟ : 11 ಸಂಚಿಕೆ: 88 ಪುಟ : 4+2 ಬೆಲೆ: 3.00 ಗುರುವಾರ ಮೇ 07 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA ಕನ್ನಡ ದಿನಪತ್ರಿಕೆ






Volume : 11 Issue : 88 Pages : 4+2 Price : 3.00 Thursday May 7 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ರೈತರ ಸಮಸ್ಯೆಗಳ ಕುರಿತು ನಾಳೆ ಸಭೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಸಮಗ್ರ ರೈತ ಸಂಘಟನೆಗಳ ಒಕ್ಕೂಟದ ವತಿಯಿಂದ ರೈತರ ವಿವಿಧ ಸಮಸ್ಯೆಗಳು ಹಾಗೂ ಬೇಡಿಕೆಗಳ ಕುರಿತು ಚರ್ಚಿಸಲು ಮೇ 8ರಂದು, ಶುಕ್ರವಾರ ಮಧ್ಯಾಹ್ನ 12 ಗಂಟೆಗೆ ಸಮಾಲೋಚನಾ ಸಭೆ ಆಯೋಜಿಸಲಾಗಿದೆ.

ಪಟ್ಟಣದ ಕೆಂಚಲಾಪುರ ಓಣಿಯ ಮಾಗಡಿ ಇಂಡಸ್ಟ್ರೀಸ್‌ನಲ್ಲಿ ಸಭೆ ನಡೆಯಲಿದ್ದು, ರೈತ ಸಂಘಟನೆಗಳ ಮುಖಂಡರು ಹಾಗೂ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಒಕ್ಕೂಟದ ಅಧ್ಯಕ್ಷ ಮಂಜುನಾಥ ಮಾಗಡಿ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

ಸಭೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ರೈತರಿಗೆ ಎದುರಾಗಿರುವ ರಾಸಾಯನಿಕ ಗೊಬ್ಬರಗಳ ಕೊರತೆ, ಎಫ್‌ಐಡಿ ತಂತ್ರಾಂಶದ ಮೂಲಕ ಗೊಬ್ಬರ ವಿತರಣೆಯಿಂದ ಉಂಟಾಗುತ್ತಿರುವ ಸಮಸ್ಯೆಗಳು, 2025–26ನೇ ಸಾಲಿನ ಬೆಳೆವಿಮೆ ಹಣ ರೈತರ ಖಾತೆಗೆ ಜಮೆಯಾಗದಿರುವುದು ಸೇರಿದಂತೆ ಹಲವು ವಿಷಯಗಳ ಕುರಿತು ಚರ್ಚಿಸಲಾಗುವುದು.

ಇದಲ್ಲದೆ, ಹಿಂಗಾರು ಹಂಗಾಮಿನಲ್ಲಿ ಬೆಂಬಲ ಬೆಲೆಯಡಿ ಕಡಲೆ ಮಾರಾಟ ಮಾಡಿದ ರೈತರಿಗೆ ಹಣ ಪಾವತಿಯಾಗದಿರುವುದು, ಕೃಷಿ ಇಲಾಖೆಯಿಂದ ಸಕಾಲಕ್ಕೆ ಬಿತ್ತನೆ ಬೀಜ ಹಾಗೂ ಕೃಷಿ ಪರಿಕರಗಳ ಸಹಾಯಧನ ಸಿಗದಿರುವುದು ಸೇರಿದಂತೆ ರೈತರ ಇತರೆ ಸಮಸ್ಯೆಗಳ ಕುರಿತು ಸರ್ಕಾರದ ಗಮನ ಸೆಳೆಯಲು ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

## ಜಿಟಿಟಿಸಿಯಲ್ಲಿ ವೃತ್ತಿಪರ ತರಬೇತಿಗೆ ಪ್ರವೇಶ ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ನರಗುಂದದ ಅಳಗವಾಡಿ ರಸ್ತೆಯಲ್ಲಿರುವ ಜಿಟಿಟಿಸಿ ಕೇಂದ್ರದಲ್ಲಿ ವಿವಿಧ ವೃತ್ತಿಪರ ತರಬೇತಿ ಕೋರ್ಸ್‌ಗಳಿಗೆ ಪ್ರವೇಶಾತಿ ಪ್ರಾರಂಭವಾಗಿದ್ದು, ಆಸಕ್ತ ಯುವಕರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಟೂಲರೂಮ್ ಮಶಿನಿಸ್ಟ್, ವೆಹಿಕಲ್ ಅಸೆಂಬ್ಲಿ ಫಿಟ್ಟರ್ ಹಾಗೂ ಆಟೋಮೊಬೈಲ್ ವೆಲ್ಡರ್ ತರಬೇತಿಗಳಿಗೆ ಎಸ್‌ಎಸ್‌ಎಲ್‌ಸಿ ಅಥವಾ ಪಿಯುಸಿ ಉತ್ತೀರ್ಣ ಹಾಗೂ ಅನುತ್ತೀರ್ಣ ಅಭ್ಯರ್ಥಿಗಳೂ ಅರ್ಜಿ ಸಲ್ಲಿಸಬಹುದಾಗಿದೆ.

ಒಂದು ವರ್ಷದ ಟೂಲರೂಮ್ ಮಶಿನಿಸ್ಟ್ ತರಬೇತಿಯಲ್ಲಿ ಟರ್ನರ್, ಮಿಲ್ಲರ್, ಗ್ರೈಂಡರ್ ಹಾಗೂ ಸಿಎನ್‌ಸಿ ಯಂತ್ರಗಳ ಪ್ರಾಯೋಗಿಕ ತರಬೇತಿ ನೀಡಲಾಗುತ್ತದೆ. ವೆಹಿಕಲ್ ಅಸೆಂಬ್ಲಿ ಫಿಟ್ಟರ್ ಮತ್ತು ಆಟೋಮೊಬೈಲ್ ವೆಲ್ಡರ್ ತರಬೇತಿಯಲ್ಲಿ ಫಿಟ್ಟರ್ ಕೆಲಸ, ಕಾರು ಬಿಡಿಭಾಗಗಳ ಜೋಡಣೆ ಹಾಗೂ ವೆಲ್ಡಿಂಗ್ ಪ್ರಾಯೋಗಿಕ ತರಬೇತಿ ನೀಡಲಾಗುತ್ತದೆ.

ಜೊತೆಗೆ ಆಟೋಕ್ಯಾಡ್, ಕನ್ನಡ ಹಾಗೂ ಇಂಗ್ಲಿಷ್ ಭಾಷಾ ಕೌಶಲ್ಯಗಳು ಮತ್ತು ಉದ್ಯೋಗ ಕೌಶಲ್ಯಗಳ ತರಬೇತಿಯನ್ನೂ ಕಲಿಸಲಾಗುತ್ತದೆ. ತರಬೇತಿ ಪೂರ್ಣಗೊಂಡ ಬಳಿಕ ಪ್ರತಿಷ್ಠಿತ ಟೂಲಿಂಗ್ ಹಾಗೂ ವಿಮಾನ ತಯಾರಿಕಾ ಕೈಗಾರಿಕೆಗಳಲ್ಲಿ ಉದ್ಯೋಗಾವಕಾಶ ಕಲ್ಪಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಜಿಟಿಟಿಸಿ ಸಂಸ್ಥೆಯಲ್ಲಿ ಅತ್ಯಾಧುನಿಕ ಯಂತ್ರೋಪಕರಣಗಳನ್ನು ಅಳವಡಿಸಿಕೊಂಡು ಸ್ಥಳೀಯ ಕೈಗಾರಿಕೆಗಳಿಗೆ ತಾಂತ್ರಿಕ ಸೇವೆ ಒದಗಿಸಲಾಗುತ್ತಿದ್ದು, ವಿದ್ಯಾರ್ಥಿಗಳಿಗೆ ಆನ್–ದಿ–ಜಾಬ್ ತರಬೇತಿ ಯನ್ನೂ ನೀಡಲಾಗುತ್ತಿದೆ.

ಅರ್ಜಿಗಳನ್ನು ಸಲ್ಲಿಸಲು ಮೇ 15 ಕೊನೆಯ ದಿನವಾಗಿದ್ದು, ತರಬೇತಿಗಳು ಜೂನ್ 1ರಿಂದ ಆರಂಭವಾಗಲಿವೆ. ಹೆಚ್ಚಿನ ಮಾಹಿತಿಗಾಗಿ ಜಿಟಿಟಿಸಿ, ಅರ್ಬನ್ ಗ್ರಾಮ, ಅಳಗವಾಡಿ ರಸ್ತೆ, ನರಗುಂದ ಕೇಂದ್ರವನ್ನು ಸಂಪರ್ಕಿಸಬಹುದು. ದೂರವಾಣಿ ಸಂಖ್ಯೆ : 8088536896.

### ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡದಿದ್ದರೆ ಮಠದ ಗದ್ದುಗೆಯ ಮುಂದೆ ಉಗ್ರ ಹೋರಾಟ : ರಾಜು ಖಾನಪ್ಪನವರ ಎಚ್ಚರಿಕೆ

# ಜಾತ್ರೆ ದುರಂತ: ರೂ. 25 ಲಕ್ಷ ಪರಿಹಾರ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ತೋಂಟದಾರ್ಯ ಮಠದ ಜಾತ್ರೆ ವೇಳೆ ಡ್ಯಾನ್ಸಿಂಗ್ ಜೋಕಾಲಿ ಮುರಿದು ಬಿದ್ದ ಪರಿಣಾಮ ಗಾಯಗೊಂಡ 20ಕ್ಕೂ ಹೆಚ್ಚು ಮಂದಿಗೆ ತಲಾ ರೂ.25 ಲಕ್ಷ ಪರಿಹಾರ ನೀಡಬೇಕು ಹಾಗೂ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಒದಗಿಸಬೇಕು ಎಂದು ಹಿಂದೂ ವೀರಶೈವ ಲಿಂಗಾಯತ ಯುವ ವೇದಿಕೆ ರಾಜ್ಯ ಸಂಚಾಲಕ ರಾಜು ಖಾನಪ್ಪನವರ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೇಡಿಕೆ ಈಡೇರಿಸದಿದ್ದರೆ ಗಾಯಾಳುಗಳು ಹಾಗೂ ವಿವಿಧ ಹಿಂದೂಪರ ಸಂಘಟನೆಗಳೊಂದಿಗೆ ಮಠದ ಗದ್ದುಗೆಯ ಎದುರು ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.



ಮೇ 2ರಂದು ರಾತ್ರಿ ಮನರಂಜನೆಗಾಗಿ ಅಳವಡಿಸಿದ್ದ ಡ್ಯಾನ್ಸಿಂಗ್ ಜೋಕಾಲಿ ಆಕಸ್ಮಿಕವಾಗಿ ಕುಸಿದು ಬಿದ್ದ ಪರಿಣಾಮ 22ಕ್ಕೂ ಹೆಚ್ಚು ಜನರಿಗೆ ಗಂಭೀರ ಗಾಯಗಳಾಗಿವೆ.

ಅವರಲ್ಲಿ ಒಬ್ಬರ ಸ್ಥಿತಿ ಚಿಂತಾಜನಕವಾಗಿದೆ ಎಂದು ಹೇಳಿದರು.

“18 ವರ್ಷದ ಯುವಕನ ಸೊಂಟ ಮುರಿದಿದ್ದು, 6 ವರ್ಷದ ಬಾಲಕನ ತಲೆಗೆ ತೀವ್ರ ಪೆಟ್ಟು ಬಿದ್ದಿದೆ. ಕೆಲವರನ್ನು ಜಿಮ್ಸ್ ಆಸ್ಪತ್ರೆಗೆ ರವಾನಿಸಲಾಗಿದೆ. ಆದರೆ ಆಸ್ಪತ್ರೆಯಲ್ಲಿ ಗಾಯಾಳುಗಳ ಬಗ್ಗೆ ನಿರ್ಲಕ್ಷ್ಯ ವಹಿಸಲಾಗುತ್ತಿದೆ. ಸ್ಕ್ಯಾನಿಂಗ್‌ಗಾಗಿ ರೂ.2,500 ಹಣ ಕೇಳಲಾಗುತ್ತಿದೆ” ಎಂದು ಆರೋಪಿಸಿದರು.

ದುರಂತಕ್ಕೆ ಕಾರಣವಾದ ಡ್ಯಾನ್ಸಿಂಗ್ ಜೋಕಾಲಿಯನ್ನು ಇದುವರೆಗೂ ಪೊಲೀಸರು ವಶಕ್ಕೆ ಪಡೆಯದಿರುವುದು ಗಂಭೀರ ವಿಷಯವಾಗಿದೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಸ್ವತಃ ಮಧ್ಯಪ್ರವೇಶಿಸಿ ಜೋಕಾಲಿಯನ್ನು ತಕ್ಷಣ ಸೀಜ್ ಮಾಡಬೇಕು.

ಇಲ್ಲದಿದ್ದರೆ ಪೊಲೀಸ್ ಇಲಾಖೆಯ ವಿರುದ್ಧವೂ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

> ತೋಂಟದಾರ್ಯ ಜಾತ್ರೆಯಲ್ಲಿ ಗಾಯಗೊಂಡ ಪ್ರತಿಯೊಬ್ಬರಿಗೂ ಮೂರು ದಿನಗಳೊಳಗೆ ರೂ.25 ಲಕ್ಷ ಪರಿಹಾರ ನೀಡಬೇಕು. ಖಾಸಗಿ ಆಸ್ಪತ್ರೆಯಲ್ಲಿ ಸೂಕ್ತ ಚಿಕಿತ್ಸೆ ಒದಗಿಸದಿದ್ದರೆ ಉಗ್ರ ಹೋರಾಟ ಅನಿವಾರ್ಯ.
>
> **–ರಾಜು ಖಾನಪ್ಪನವರ**

ಸಾಂವಿಧಾನಿಕ ಹೋರಾಟಗಳಿಗೆ ಬೆಲೆ ಇಲ್ಲದಂತಾಗಿದ್ದು, ಈ ಹಿನ್ನೆಲೆಯಲ್ಲಿ ತೋಂಟ–ದಾರ್ಯ ಜಾತ್ರೆ ಅವಘಡ ಪ್ರಕರಣವನ್ನು ಕಾನೂನು ಹೋರಾಟದ ಮೂಲಕ ಮುಂದುವರಿಸಲಾಗುವುದು.

ಪೊಲೀಸ್ ಇಲಾಖೆ, ಟೆಂಡರ್‌ದಾರರು, ಜಿಲ್ಲಾಡಳಿತ ಹಾಗೂ ನಗರಸಭೆಯನ್ನು ಪ್ರಕರಣದಲ್ಲಿ ಪಕ್ಷಕಾರರನ್ನಾಗಿ ಮಾಡಲಾಗುವುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾದಿಗ ಸಂಘರ್ಷ ಸಮಿತಿಯ ರಾಘವೇಂದ್ರ ಪರಾಪೂರ, ಮಹೇಶ ರೋಖಡೆ, ಪಿ.ಎಸ್. ಕಾಳೆ, ವಿಶ್ವನಾಥ ಶಿರಿ, ಗೀತಾ ನವಲಗುಂದ, ಸುಮನ್ ನವಲಗುಂದ, ಕುಮಾರ ನಡಗೇರಿ, ಸತೀಶ್ ಕುಂಬಾರ, ರಮೇಶ್ ನವಲಗುಂದ, ಮಂಜು ನವಲಗುಂದ, ಶಂಕರ್ ಗಬ್ಬೂರ, ವಿಜಯ ದಲಬಂಜನ್, ಕಿರಣ್ ಕಬಾಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ವಿನಾಯಕ ಮಾನ್ವಿ ಅಮಾಯಕ

ಜಾತ್ರಾ ಸಮಿತಿಯ ಅಧ್ಯಕ್ಷ ವಿನಾಯಕ ಮಾನ್ವಿ ಸೇರಿದಂತೆ ಕೆಲವರ ವಿರುದ್ಧ ಮಾತ್ರ ಪ್ರಕರಣ ದಾಖಲಿಸಿರುವುದು ಸರಿಯಲ್ಲ. ಸಮಿತಿಯ ಎಲ್ಲಾ ಪದಾಧಿಕಾರಿಗಳ ವಿರುದ್ಧ ಪ್ರಕರಣ ದಾಖಲಾಗಬೇಕು, ಕೇವಲ ಜಾತ್ರಾ ಸಮಿತಿ ಅಧ್ಯಕ್ಷ ವಿನಾಯಕ ಮಾನ್ವಿ ಅವರೊಬ್ಬರನ್ನೇ ಹೊಣೆಗಾರರನ್ನಾಗಿ ಮಾಡುವಿಯ ಸರಿಯಲ್ಲ. ಅವರೊಬ್ಬ ಅಮಾಯಕರು ಎಂದು ಹೋರಾಟಗಾರ ರಾಜು ಖಾನಪ್ಪನವರ ತಿಳಿಸಿದ್ದಾರೆ.

### ಕುರ್ತಕೋಟಿ ಗ್ರಾಮದ ಯುವಕ ಪ್ರಭು ಡಿಗ್ಗಾವಿಗೆ ಬಿಜೆಪಿ ಮುಖಂಡರಿಂದ ಶುಭ ಹಾರೈಕೆ

# ಬಿಎಸ್ವೈ ಅಭಿಮಾನೋತ್ಸವಕ್ಕೆ ಚಿತ್ರದುರ್ಗದವರೆಗೆ ಸೈಕಲ್ ಯಾತ್ರೆ

■ವಿಜಯಸಾಕ್ಷಿ ಸುದ್ದಿ, ಗದಗ

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಸಕ್ರಿಯ ರಾಜಕೀಯ ಜೀವನದ 50 ವರ್ಷಗಳ ಅಂಗವಾಗಿ ಮೇ 9ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಗದಗ ನಗರದಿಂದ ಚಿತ್ರದುರ್ಗದವರೆಗೆ ಸೈಕಲ್ ಮೂಲಕ ಪ್ರಯಾಣ ಬೆಳೆಸಿದ ಕುರ್ತಕೋಟಿ ಗ್ರಾಮದ ಯುವಕ ಪ್ರಭು ಡಿಗ್ಗಾವಿಗೆ ಬಿಜೆಪಿ ಮುಖಂಡರು ಶುಭ ಹಾರೈಸಿದರು.

ಗದಗ ತಾಲೂಕಿನ ಕುರ್ತಕೋಟಿ ಗ್ರಾಮದ ಯುವಕ ಹಾಗೂ ಬಿ.ವೈ. ವಿಜಯೇಂದ್ರ ಮತ್ತು ಸುಧೀರ್ ಕಾಟಿಗರ ಅವರ ಅಭಿಮಾನಿಯಾಗಿರುವ ಪ್ರಭು ಡಿಗ್ಗಾವಿ ಅವರು ಸೈಕಲ್ ಮೂಲಕ ಚಿತ್ರದುರ್ಗಕ್ಕೆ ತೆರಳಲು ನಿರ್ಧರಿಸಿದ್ದು,



> ಯಡಿಯೂರಪ್ಪನವರು ರಾಜ್ಯಾದ್ಯಂತ ಸೈಕಲ್ ಮೂಲಕ ಸಂಚರಿಸಿ ಪಕ್ಷವನ್ನು ಸಂಘಟಿಸಿದವರು. ದಕ್ಷಿಣ ಭಾರತದಲ್ಲಿ ಬಿಜೆಪಿ ಬೆಳವಣಿಗೆಗೆ ಅವರ ಕೊಡುಗೆ ಅಪಾರ.
>
> **–ಎಸ್.ವಿ. ಸಂಕನೂರ,** ವಿಧಾನ ಪರಿಷತ್ ಸದಸ್ಯರು

ಬುಧವಾರ ಬೆಳಿಗ್ಗೆ ನಗರದ ಪುಟ್ಟರಾಜ ಗವಾಯಿಗಳ ಮಠದಲ್ಲಿ ಪೂಜೆ ಸಲ್ಲಿಸಿ ಪ್ರಯಾಣ ಆರಂಭಿಸಿದರು. ಕಲ್ಲಯ್ಯಜ್ಜನವರು ಯಾತ್ರೆಗೆ ಚಾಲನೆ ನೀಡಿದರು.

▶▶ 2ನೇ ಪುಟಕ್ಕೆ

## ಮೇ.10ರಿಂದ ರಹಿಮಾನ ಶ್ಯಾವಲಿ ಉರುಸು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಐತಿಹಾಸಿಕ ಹಿನ್ನೆಲೆಯುಳ್ಳ ನರೇಗಲ್ಲ ಪಟ್ಟಣದ ಹಜರತ್ ರಹಿಮಾನ ಶ್ಯಾವಲಿ(ರಹ) ಶರೀಫರ ಉರುಸು ಮಹೋತ್ಸವವು ಮೇ 10ರಿಂದ 12ರವರೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಜರುಗಲಿದೆ.

ಮೇ 10ರಂದು ಸಂಜೆ 6 ಗಂಟೆಗೆ ಕೋಚಲಾಪೂರ ಗ್ರಾಮದಿಂದ ಲಕ್ಷ್ಮೀದೇವಿಯ ಪಲ್ಲಕ್ಕಿ ಹಾಗೂ ಗಂಧದ ಮೆರವಣಿಗೆ ಭಕ್ತಿಭಾವದಿಂದ ಹೊರಡಲಿದೆ.

ಮೇ 11ರಂದು ಬೆಳಗ್ಗೆ 6ರಿಂದ 10 ಗಂಟೆಯವರೆಗೆ ಸಾಧು–ಸಂತರಿಗೆ ಅನ್ನಸಂತರ್ಪಣೆ ಕಾರ್ಯಕ್ರಮ ನಡೆಯಲಿದೆ. ಅದೇ ದಿನ ಸಂಜೆ ಉರುಸಿನ ಭವ್ಯ ಮೆರವಣಿಗೆ ಜರುಗಲಿದೆ.

ಮೇ 12ರಂದು ಬೆಳಗ್ಗೆ 10 ಗಂಟೆಗೆ ಮರಿ ಉರುಸು ಕಾರ್ಯಕ್ರಮ ನೆರವೇರಲಿದೆ ಎಂದು ದರ್ಗಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.






### ಕಟ್ಟಡ ಕಾರ್ಮಿಕರಿಗೆ ಸುರಕ್ಷತಾ ಕಿಟ್ ವಿತರಣೆ ಕಾರ್ಯಕ್ರಮದಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಆರೋಪ

# ಕಾರ್ಮಿಕರಿಗೆ ವಿತರಿಸುವ ಕಿಟ್‌ಗಳ ಗುಣಮಟ್ಟ ಕಳಪೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

“ಸರ್ಕಾರ ಬಡ ಕಾರ್ಮಿಕರ ಸ್ವಯಂ ಉದ್ಯೋಗಕ್ಕೆ ನೆರವಾಗುವ ಉದ್ದೇಶದಿಂದ ನೀಡುತ್ತಿರುವ ಕಾರ್ಮಿಕ ಕಿಟ್‌ಗಳು ಕಳಪೆ ಗುಣಮಟ್ಟದ್ದಾಗಿರುವುದು ದುರಾದೃಷ್ಟಕರ” ಎಂದು ಶಾಸಕ ಡಾ. ಚಂದ್ರು ಲಮಾಣಿ ಆರೋಪಿಸಿದರು.

ಪಟ್ಟಣದ ತಾಪಂ ಸಭಾಂಗಣದಲ್ಲಿ ಕಾರ್ಮಿಕ ಇಲಾಖೆ ಹಾಗೂ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ಕಟ್ಟಡ ಕಾರ್ಮಿಕರಿಗೆ ಸುರಕ್ಷತಾ ಕಿಟ್ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಈ ಕುರಿತು ಕಾರ್ಮಿಕ ಸಂಘಟನೆಗಳ ಮುಖಂಡರಿಗೆ ಮೊದಲೇ ತಿಳಿಸಿದ್ದೇನೆ. ಆದರೆ ಕಿಟ್ ವಿತರಣೆ ಬಗ್ಗೆ ಶಾಸಕರು ಹಿಂದೇಟು ಹಾಕುತ್ತಿದ್ದಾರೆ ಎಂಬ ಆರೋಪ ಬಾರದಿರಲೆಂದು ವಿತರಣೆ ಕಾರ್ಯಕ್ರಮಕ್ಕೆ ಒಪ್ಪಿಕೊಂಡಿದ್ದೇನೆ ಎಂದು ಹೇಳಿದರು.



> ಕಾರ್ಮಿಕರಿಗೆ ಕಿಟ್ ಒದಗಿಸುವ ಗುತ್ತಿಗೆದಾರರು ಕಳಪೆ ಗುಣಮಟ್ಟದ ಸಾಮಗ್ರಿಗಳನ್ನು ಪೂರೈಸಿದ್ದಾರೆ. ಈ ಬಗ್ಗೆ ಹಿರಿಯ ಅಧಿಕಾರಿಗಳ ಗಮನಕ್ಕೆ ತರಬೇಕು.
>
> **– ಡಾ. ಚಂದ್ರು ಲಮಾಣಿ, ಶಾಸಕ**

ತಾಲೂಕಿನಲ್ಲಿ ಗೌಂಡಿ ಕಿಟ್ 202, ಎಲೆಕ್ಟ್ರಿಷಿಯನ್ ಕಿಟ್ 48, ಪ್ಲಂಬರ್ ಕಿಟ್ 15, ವೆಲ್ಡರ್ ಕಿಟ್ 11, ಪೇಂಟರ್ ಕಿಟ್ 48 ಹಾಗೂ ಕಾರ್ಪೆಂಟರ್ ಕಿಟ್ 38 ಸೇರಿ ಒಟ್ಟು 362 ಕಿಟ್‌ಗಳನ್ನು ಫಲಾನುಭವಿಗಳಿಗೆ ವಿತರಿಸಲಾಗುತ್ತಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಕಿಟ್‌ಗಳ ಗುಣಮಟ್ಟದ ಕುರಿತು ಹಿರಿಯ ಅಧಿಕಾರಿಗಳ ಗಮನಕ್ಕೆ ತರಲಾಗುವುದು ಎಂದು ಅಧಿಕಾರಿಗಳು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ತಾಪಂ ಇಒ ಮಂಜುಳಾ ಹಕಾರಿ, ತಾಪಂ ಎಡಿ ಧರ್ಮರ ಕೃಷ್ಣಪ್ಪ, ಕಾರ್ಮಿಕ ಇಲಾಖೆ ನಿರೀಕ್ಷಕ ಅಭಿನಂದನ ಕೌಟಕೊಪ್ಪ, ಡಿಇಒ ಶೋಭಾ ಸ್ವಾಮಿ, ರಾಣಿ ಪಾಟೀಲ ಹಾಗೂ ಕಾರ್ಮಿಕ ಸಂಘಟನೆಗಳ ಸದಸ್ಯರು ಉಪಸ್ಥಿತರಿದ್ದರು.

# ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2026–27ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಹೊಸದಾಗಿ ಮಂಜೂರಾಗಿರುವ ಮಹಿಳಾ ಪದವಿ ಪೂರ್ವ ಕಾಲೇಜು, ಗದಗದಲ್ಲಿ ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಗೆ ವಿವಿಧ ವಿಷಯಗಳನ್ನು ಬೋಧಿಸಲು ಅರ್ಹ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಕನ್ನಡ, ಇಂಗ್ಲಿಷ್, ಹಿಂದಿ, ಉರ್ದು ಸೇರಿದಂತೆ ವಿಜ್ಞಾನ ವಿಭಾಗದ ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ, ಜೀವಶಾಸ್ತ್ರ, ವಾಣಿಜ್ಯ ವಿಭಾಗದ ಕಂಪ್ಯೂಟರ್ ವಿಜ್ಞಾನ, ಅರ್ಥಶಾಸ್ತ್ರ, ವ್ಯವಹಾರ ಅಧ್ಯಯನ, ಲೆಕ್ಕಶಾಸ್ತ್ರ ಹಾಗೂ ಕಲಾ ವಿಭಾಗದ ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ ಮತ್ತು ಸಮಾಜಶಾಸ್ತ್ರ ವಿಷಯಗಳಿಗೆ ಉಪನ್ಯಾಸಕರು ಅಗತ್ಯವಿದ್ದಾರೆ.

ಅರ್ಹ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಮೇ 15ರೊಳಗಾಗಿ ತಮ್ಮ ಶೈಕ್ಷಣಿಕ ದಾಖಲೆಗಳೊಂದಿಗೆ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನಾ ಆಜಾದ್ ಭವನ, ಜಿಲ್ಲಾ ನ್ಯಾಯಾಲಯದ ಎದುರುಗಡೆ, ಹುಬ್ಬಳ್ಳಿ ರಸ್ತೆ, ಗದಗ ಕಚೇರಿಗೆ ಖುದ್ದಾಗಿ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು ಎಂದು ಇಲಾಖೆಯ ಅಧಿಕಾರಿ ಅಮಿತ್ ಬಿದರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉದ್ಯೋಗಕ್ಕಾಗಿ ನೇರ ಸಂದರ್ಶನ ಮೇ 8ರಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ನಿರುದ್ಯೋಗಿ ಅಭ್ಯರ್ಥಿಗಳಿಗೆ ಉದ್ಯೋಗಾವಕಾಶ ಒದಗಿಸುವ ನಿಟ್ಟಿನಲ್ಲಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಮೇ 8ರಂದು ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ.

ವಿವೇಕಾನಂದ ನಗರ, 4ನೇ ಅಡ್ಡರಸ್ತೆ, ಸಾಯಿ ಬಾಬಾ ದೇವಸ್ಥಾನದ ಹಿಂಭಾಗದಲ್ಲಿರುವ ಕೆ.ಎಚ್.ಬಿ ಕಾಲೋನಿ, ಗದಗದಲ್ಲಿ ಬೆಳಿಗ್ಗೆ 10 ಗಂಟೆಗೆ ಈ ನೇರ ಸಂದರ್ಶನ ನಡೆಯಲಿದೆ.

ಸ್ವತಂತ್ರ ಮೈಕ್ರೋಫಿನ್ ಪ್ರೈವೇಟ್ ಲಿಮಿಟೆಡ್, ಗದಗ ಸಂಸ್ಥೆ ಭಾಗವಹಿಸಲಿದ್ದು, ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ ಹಾಗೂ ಯಾವುದೇ ಪದವಿ ವಿದ್ಯಾರ್ಹತೆ ಹೊಂದಿದ ಅಭ್ಯರ್ಥಿಗಳು ಪಾಲ್ಗೊಳ್ಳಬಹುದು.

ಎಸ್‌ಎಫ್‌ಒ (ಫೀಲ್ಡ್ ವರ್ಕ್) ಹುದ್ದೆಗಳಿಗೆ ನೇಮಕಾತಿ ನಡೆಯಲಿದ್ದು, 18 ರಿಂದ 30 ವರ್ಷದೊಳಗಿನ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಅರ್ಹರಾಗಿರುತ್ತಾರೆ. ಆಯ್ಕೆಯಾದವರಿಗೆ ಶಿರಹಟ್ಟಿ, ಮುಂಡರಗಿ, ಗದಗ ಮತ್ತು ಅಣ್ಣಿಗೇರಿ ಪ್ರದೇಶಗಳಲ್ಲಿ ಕೆಲಸ ನೀಡಲಾಗುತ್ತದೆ.

ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಝೆರಾಕ್ಸ್ ಪ್ರತಿಗಳು, ಎರಡು ರೆಸ್ಯೂಮ್ ಹಾಗೂ ಆಧಾರ್ ಕಾರ್ಡ್ ಪ್ರತಿಯೊಂದಿಗೆ ಹಾಜರಾಗಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸುವವರಿಗೆ ನೋಂದಣಿ ಕಡ್ಡಾಯವಾಗಿದೆ.

ಯುವನಿಧಿ ಯೋಜನೆಯ ಫಲಾನುಭವಿಗಳು ಕಡ್ಡಾಯವಾಗಿ ಈ ಸಂದರ್ಶನದಲ್ಲಿ ಭಾಗವಹಿಸಬೇಕು ಎಂದು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ 8951460061 ಹಾಗೂ 6363330688 ದೂರವಾಣಿ ಸಂಖ್ಯೆಗಳ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್ ತಿಳಿಸಿದ್ದಾರೆ.

# ಬಿಎಸ್ವೈ ಅಭಿಮಾನೋತ್ಸವಕ್ಕೆ ಚಿತ್ರದುರ್ಗದವರೆಗೆ ಸೈಕಲ್ ಯಾತ್ರೆ

▶▶ ಮೊದಲನೇ ಪುಟದಿಂದ

ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಮಾತನಾಡಿ, ಮೇ 9ರಂದು ನಡೆಯುವ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ರಾಜ್ಯದ ಮೂಲೆ ಮೂಲೆಗಳಿಂದ ಲಕ್ಷಾಂತರ ಜನರು ಆಗಮಿಸಲಿದ್ದು, ಗದಗ ಜಿಲ್ಲೆಯ ಕಾರ್ಯಕರ್ತರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು. ಒಬಿಸಿ ಮೋರ್ಚಾ ರಾಜ್ಯ ಕಾರ್ಯದರ್ಶಿ ಸುಧೀರ್ ಕಾಟಿಗರ ಮಾತನಾಡಿ, ಯಡಿಯೂರಪ್ಪನವರ ಅಭಿಮಾನೋತ್ಸವ ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಗಮನ ಸೆಳೆದಿದೆ. ಅವರ ಹಾದಿಯಲ್ಲೇ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಕೂಡ ಯುವಕರಲ್ಲಿ ಅಪಾರ ಅಭಿಮಾನಿಗಳನ್ನು ಹೊಂದಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಶಂಕರ ಕಾಕಿ, ಅನೀಲ ಅಬ್ಬಿಗೇರಿ, ರಮೇಶ ಸಜ್ಜಗಾರ, ಜಯಶ್ರೀ ಉಘಲಾಟ, ಸಂತೋಷ ಅಕ್ಕಿ, ಬಸವರಾಜ ನರೆಗಲ್, ಇರ್ಷಾ ಮಾನ್ವಿ, ರವಿ ಮಾನ್ವಿ, ಮಂಜುನಾಥ ಶಾಂತಗೇರಿ, ದೇವೇಂದ್ರಪ್ಪ ಹೂಗಾರ್, ರವಿ ಚವಾಣ, ನಾರಾಯಣ ಟಿಕಂದಾರ, ಕುಶಾಲ್ ಕಾಟಿಗರ ಸೇರಿದಂತೆ ಬಿಜೆಪಿ ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಯಡಿಯೂರಪ್ಪ ಅಭಿಮಾನಿಗಳು ಉಪಸ್ಥಿತರಿದ್ದರು.

# ಮೇ ತಿಂಗಳ ಮೆರುಗಿಗೆ ಗುಲ್ ಮೊಹರ್ ಮೊಹರು..!

## ಕೆಂಬಣ್ಣದ ಹೂವಿನ ರಂಗಿನಲ್ಲಿ ಪ್ರಕೃತಿಯ ಅದ್ಭುತ–ಗುಲ್ ಮೊಹರ್ ಮರಗಳ ವೈಶಿಷ್ಟ್ಯಗಳ ಕುರಿತ ವಿಶೇಷ ಲೇಖನ

ಭೂಮಿಯ ಮೇಲೆ ಇರುವ ಪ್ರತಿಯೊಂದು ಜೀವಿಗೂ ಮೂಲಭೂತ ಅವಶ್ಯಕತೆಯಾಗಿರುವ ಆಮ್ಲಜನಕವನ್ನು ಪೂರೈಸುವ ಮರಗಳು ನಮ್ಮ ಅಸ್ತಿತ್ವದ ಆಧಾರವಾಗಿವೆ. ಹೌದು ಓದುಗರೇ, ನಾನು ಹೇಳಲು ಹೊರಟಿರುವುದು ಒಂದು ಸುಂದರ, ಉಜ್ವಲ ಕೆಂಪು ಹೂ ಬಿಡುವ ಗುಲ್ ಮೊಹರ್ ಮರದ ಬಗ್ಗೆ.

ನನ್ನೂರು ರಾಮಗೇರಿಯಿಂದ ಲಕ್ಷ್ಮೇಶ್ವರದ ಇಟ್ಟಿಗೆರೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ, ಬಟ್ಟೂರು ಹಾಗೂ ಗೊಜನೂರ ಮಾರ್ಗದ ರಸ್ತೆ ಬದಿಯಲ್ಲಿ ಅಬ್ಬಾ..! ಕೆಂಪು ಹೂಗಳ ಸಂಭ್ರಮ ಹೇಳತೀರದು..! ಹಸಿರು ಎಲೆಗಳಿಗೆ ಜಾಗ ಕೊಡದೇ ಅರಳುವ ಈ ಹೂಗಳು ಮನಸ್ಸನ್ನು ಮುದಗೊಳಿಸುತ್ತವೆ.

'ಹೂವಿನಿಂದ ನಾರು ಸ್ವರ್ಗಕ್ಕೇರಿತು' ಎಂಬಂತೆ ತನ್ನ ಕೆಂಪು ಚೆಲುವಿನಿಂದ ಮನಸ್ಸನ್ನು ಸೆಳೆಯುವ ಗುಲ್ ಮೊಹರ್ ಹೂಗಳು ಬಿರು ಬೇಸಿಗೆಯ ಬಿಸಿಲಲ್ಲಿಯೇ ಅರಳುವ ಪ್ರಕೃತಿಯ ಸುಂದರಿಯರು. ಈ ವರ್ಷ ಏಪ್ರಿಲ್–ಮೇ ತಿಂಗಳ ಆರಂಭದಿಂದ ಶಿರಹಟ್ಟಿಯ ಡಬಾಲಿ ಶಾಲೆ ಆವರಣ ಹಾಗೂ ತಾಲ್ಲೂಕು ಕ್ರೀಡಾಂಗಣದಲ್ಲಿ ಈ ಹೂಗಳ ಸೊಬಗು ಕಣ್ಣಿಗೆ ಮತ್ತು ಮನಸ್ಸಿಗೆ ಹಬ್ಬದಂತಾಗಿದೆ.

### ಪ್ರವಾಸಿಗರ ಆಕರ್ಷಣೆಯ ಕೇಂದ್ರ

ಈ ಭಾಗಕ್ಕೆ ಬರುವ ಪ್ರವಾಸಿಗರಿಗೆ ಗುಲ್ ಮೊಹರ್ ಮರಗಳು ತಮ್ಮ ಚೆಲುವಿನಿಂದ ಸ್ವಾಗತ ಕೋರುತ್ತವೆ. ಉತ್ತರ ಕರ್ನಾಟಕದಲ್ಲಿ ಇವುಗಳನ್ನು "ಸಂಕೇಶ್ವರ ಮರ" ಎಂದೂ ಕರೆಯಲಾಗುತ್ತದೆ. ಉರಿ ಬಿಸಿಲಿನ ಮಧ್ಯೆಯೂ ನಸು ನಗುವಂತೆ ಕಾಣುವ ಈ ಹೂಗಳು ಎಲ್ಲರ ಗಮನ ಸೆಳೆಯುತ್ತವೆ.

### ಗುಲ್ ಮೊಹರ್ (May Flower) ಪರಿಚಯ

ಡೆಲೋನಿಕ್ಸ್ ರೆಜಿಯಾ ಎಂಬುದು ಗುಲ್ ಮೊಹರ್ ಮರದ ವೈಜ್ಞಾನಿಕ ಹೆಸರು. ಇದು ಮಡಗಾಸ್ಕರ್ ದೇಶದ ಮೂಲದ ಸಸ್ಯವಾಗಿದ್ದು ಫ್ಯಾಬೇಸಿಯೆ ಕುಟುಂಬಕ್ಕೆ ಸೇರಿದೆ. 19ನೇ ಶತಮಾನದಲ್ಲಿ ಸಸ್ಯಶಾಸ್ತ್ರಜ್ಞ ವೆನ್ಸೆಲ್ ಬೋಜರ್ ಇದನ್ನು ಗುರುತಿಸಿದರು.



> "ರಾಷ್ಟ್ರವಾಗಿ ಅಸ್ತಿತ್ವದಲ್ಲಿರಲು, ರಾಜ್ಯವಾಗಿ ಏಳಿಗೆ ಹೊಂದಲು, ಜನರಂತೆ ಬದುಕಲು, ನಾವು ಮರಗಳನ್ನು ಹೊಂದಿರಬೇಕು."
> – ಥಿಯೋಡರ್ ರೂಸ್ವೆಲ್ಟ್

ಗುಲ್ ಮೊಹರ್ ಮರವು ತನ್ನ ವರ್ಣರಂಜಿತ ಹೂಗಳಿಂದ ವಿಶ್ವದ ಅತ್ಯಂತ ಸುಂದರ ಮರಗಳಲ್ಲಿ ಒಂದೆಂದು ಪರಿಗಣಿಸಲಾಗುತ್ತದೆ. ವಸಂತ ಮತ್ತು ಬೇಸಿಗೆಯಲ್ಲಿ ಇದು ಜ್ವಾಲೆಯಂತೆ ಕೆಂಪಾಗಿ ಅರಳಿ ನಿಂತಿರುತ್ತದೆ. ಇಂಗ್ಲಿಷ್‌ನಲ್ಲಿ ಇದನ್ನು Royal Poinciana, Flamboyant, Flame Tree ಎಂದು ಕರೆಯುತ್ತಾರೆ.

### ವಿವಿಧ ಹೆಸರುಗಳು – ವಿಭಿನ್ನ ದೇಶಗಳಲ್ಲಿ ಗುರುತು

ಭಾರತದಲ್ಲಿ "ಮೇ ಫ್ಲವರ್", "ಗುಲ್ ಮೊಹರ್" ಎಂದು ಕರೆಯಲಾಗುತ್ತದೆ. ಪಶ್ಚಿಮ ಬಂಗಾಳ ಮತ್ತು ಒಡಿಶಾದಲ್ಲಿ "ಕೃಷ್ಣಚೂರಾ", ಶ್ರೀಲಂಕಾದಲ್ಲಿ "ಮಾರ ಮರ", ಕೇರಳದಲ್ಲಿ "ಕಾಲ್ವರಿಪ್ಪು (ಕಾಲ್ವರಿಪೂವ್)" ಎಂದು ಕರೆಯುತ್ತಾರೆ. ಪಾಕಿಸ್ತಾನ, ಮಾರಿಷಸ್ ಹಾಗೂ ಇತರ ಉಷ್ಣವಲಯ ದೇಶಗಳಲ್ಲಿಯೂ ಇದು ವ್ಯಾಪಕವಾಗಿ ಬೆಳೆಸಲಾಗುತ್ತದೆ.

ಕೇರಳದಲ್ಲಿ ಗುಲ್ ಮೊಹರ್ ಹೂಗಳಿಗೆ ಧಾರ್ಮಿಕ ಮಹತ್ವವೂ ಇದೆ. ಯೇಸುಕ್ರಿಸ್ತನ ಶಿಲುಬೆಯ ಸಮಯದಲ್ಲಿ ಈ ಮರದ ಹೂಗಳು ಕೆಂಪಾದವು ಎಂಬ ನಂಬಿಕೆ ಜನರಲ್ಲಿ ಇದೆ. ಅದರಿಂದ ಈ ಹೂಗಳಿಗೆ ವಿಶೇಷ ಸ್ಥಾನಮಾನ ದೊರೆತಿದೆ.

ಗುಲ್ ಮೊಹರ್ ಮರವು ಅಲಂಕಾರಿಕ ಮೌಲ್ಯ ಮಾತ್ರವಲ್ಲದೆ ಉತ್ತಮ ನೆರಳಿನ ಮರವಾಗಿಯೂ ಪ್ರಸಿದ್ಧ. ಸಾಮಾನ್ಯವಾಗಿ 5 ಮೀಟರ್ ಎತ್ತರಕ್ಕೆ ಬೆಳೆಯುವ ಈ ಮರ 12 ಮೀಟರ್ ವರೆಗೆ ಬೆಳೆದು ದಟ್ಟ ನೆರಳು ನೀಡುತ್ತದೆ. ಕೆಲವೊಂದು ಪ್ರದೇಶಗಳಲ್ಲಿ ಇದು ಬರಗಾಲದಲ್ಲಿ ಎಲೆಗಳನ್ನು ಬಿಸಾಡಿದರೂ, ಇನ್ನಿತರ ಪ್ರದೇಶಗಳಲ್ಲಿ ಸದಾ ಹಸಿರಾಗಿಯೇ ಇರುತ್ತದೆ.

ಹೂವಿನ ಮೊಗ್ಗುಗಳು ವಿಷಕಾರಿಯಲ್ಲದೆ ಸುವಾಸನೆಗಾಗಿ ಬಳಸಲಾಗುತ್ತವೆ. ಆದರೆ ಇದರ ಬೇರುಗಳು ಆಳವಿಲ್ಲದಿರುವುದರಿಂದ ಗಾಳಿ–ಮಳೆಯಲ್ಲಿ ಬೀಳುವ ಸಾಧ್ಯತೆಯೂ ಇದೆ.

ಹೆದ್ದಾರಿ ಹಾಗೂ ರಸ್ತೆ ಅಭಿವೃದ್ಧಿ ಹೆಸರಿನಲ್ಲಿ ಕಳೆದ ಕೆಲವು ವರ್ಷಗಳಲ್ಲಿ ಸಾವಿರಾರು ಗುಲ್ ಮೊಹರ್ ಮರಗಳು ಕಡಿದುಹೋಗಿವೆ. ಮುಂದಿನ ದಿನಗಳಲ್ಲಿ ಈ ಸುಂದರ ಮರಗಳು ಅಪರೂಪವಾಗುವ ಆತಂಕ ವ್ಯಕ್ತವಾಗುತ್ತಿದೆ.

ಕವಿಯ ಮಾತಿನಂತೆ "ಹೂ ಚೆಲುವೆಲ್ಲಾ ತಂದೆಂದಿತು" ಎನ್ನುವಂತೆ ಗುಲ್ ಮೊಹರ್ ಹೂಗಳ ಅಂದಕ್ಕೆ ಸಾಟಿಯೇ ಇಲ್ಲ. ಬಿರು ಬಿಸಿಲಲ್ಲೂ ನಸುನಗುವ ಈ ಹೂಗಳು ಪ್ರಯಾಣಿಕರನ್ನು ಸೆಳೆಯುವ ಪ್ರಕೃತಿಯ ಅಪ್ಸರೆಯರಂತೆ ಕಾಣುತ್ತವೆ.

ಒಟ್ಟಾರೆಯಾಗಿ, ಮೇ ತಿಂಗಳ ಉರಿ ಬಿಸಿಲಿನಲ್ಲಿ ಈ ಕೆಂಪು ಹೂಗಳ ಸೊಬಗು ಸಸ್ಯಪ್ರೇಮಿಗಳ ಹೃದಯದಲ್ಲಿ ಶಾಶ್ವತ ಸ್ಥಾನ ಪಡೆದುಕೊಳ್ಳುತ್ತದೆ.



– ಬಸವರಾಜ ಎಂ. ಯರಗುಪ್ಪಿ
ಶಿಕ್ಷಕರು ಹಾಗೂ ಹವ್ಯಾಸಿ ಬರಹಗಾರರು,
ಸಾ.ಪೊ: ರಾಮಗೇರಿ, ತಾ: ಲಕ್ಷ್ಮೇಶ್ವರ

## ಸೂಪರ್ ಎಲ್‌ನಿನೋ ಭೀತಿ: ಗೊಜನೂರ ಗ್ರಾಮದಲ್ಲಿ ಗೋಲಕಮ್ಮದೇವಿಗೆ ಪೂಜೆ– ಮಳೆಗಾಗಿ ಭಜನೆ

# ಮಳೆಗಾಗಿ ದೇವರ ಮೊರೆ ಹೋದ ರೈತರು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರಸಕ್ತ ಮುಂಗಾರಿನಲ್ಲಿ ಸೂಪರ್ ಎಲ್‌ನಿನೋ ಪ್ರಭಾವದಿಂದ ಮಳೆಯ ಕೊರತೆ ಉಂಟಾಗುವ ಭೀತಿ ವ್ಯಕ್ತವಾಗಿದ್ದು, ಈಗಾಗಲೇ ತಗ್ಗದ ಬಿಸಿಲಿನ ಪರಿಣಾಮ ಮತ್ತು ಕಾಣದ ಮಳೆಯ ವಾತಾವರಣದಿಂದ ರೈತ ಸಮುದಾಯದಲ್ಲಿ ಆತಂಕ ಹೆಚ್ಚಾಗಿದೆ. ದಿಕ್ಕುತೋಚದ ಸ್ಥಿತಿಗೆ ತಲುಪಿರುವ ರೈತರು ಮಳೆರಾಯನ ಕೃಪೆಗೆ ದೇವರ ಮೊರೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ.

ಇದಕ್ಕೆ ಸಾಕ್ಷಿಯಾಗಿ ತಾಲೂಕಿನ ಗೊಜನೂರ ಗ್ರಾಮದ ರೈತರು, ರೈತ ಮಹಿಳೆಯರು ಹಾಗೂ ಮಕ್ಕಳು ಮಂಗಳವಾರ ಮಳೆರಾಯನ ಕೃಪೆಗಾಗಿ ಗ್ರಾಮದ ಗುಡ್ಡದ ಮೇಲಿರುವ ಏಳು ಮಕ್ಕಳ ತಾಯಿ ಗೋಲಕಮ್ಮ ದೇವಿಗೆ ಪೂಜೆ ಸಲ್ಲಿಸಿ ಉಡಿ ತುಂಬಿ ಮಳೆಗಾಗಿ ಪ್ರಾರ್ಥಿಸಿದರು.



> "ರೈತರ ಬದುಕಿಗೆ ಕೃಷಿಯೇ ಆಧಾರ, ಕೃಷಿಗೆ ಮಳೆಯೇ ಆಸರೆ. ರೈತರ ಜೀವನ ಮಾನ್ಸೂನ್ ಮಳೆಯೊಂದಿಗಿನ ಜೂಜಾಟದಂತಿದೆ. ಈ ವರ್ಷ ಹವಾಮಾನ ಇಲಾಖೆ ಮಾಹಿತಿ ಪ್ರಕಾರ ಮುಂಗಾರು ಕೊರತೆಯ ಭೀತಿ ರೈತರಲ್ಲಿ ಚಿಂತೆ ಮೂಡಿಸಿದೆ. ಇಂತಹ ಸಂದರ್ಭದಲ್ಲಿ ದೇವರ ಮೊರೆ ಹೋಗುವುದು ಅನಿವಾರ್ಯವಾಗಿದ್ದು, ಅದು ನಮ್ಮ ಸಂಪ್ರದಾಯವೂ ಆಗಿದೆ. ಮಳೆರಾಯನ ಕೃಪೆಗಾಗಿ ಗೋಲಕಮ್ಮ ದೇವಿಗೆ ಮೊರೆ ಹೋದರೆ ಮಳೆಯಾಗುತ್ತದೆ ಎಂಬ ನಂಬಿಕೆ ಇದೆ,"– ಚನ್ನಪ್ಪ ಷಣ್ಮುಕಿ, ರೈತ ಮುಖಂಡ

ಗ್ರಾಮದ ಶ್ರೀ ಮಲ್ಲಿಕಾರ್ಜುನ ತರುಣ ಭಜನಾ ಸಂಘದ ಸದಸ್ಯರು ಮಹಿಳೆಯರು ಮತ್ತು ಮಕ್ಕಳೊಂದಿಗೆ ಭಜನೆ, ಪ್ರಾರ್ಥನೆಯೊಂದಿಗೆ ಗೋಲಕಮ್ಮ ದೇವಿ ಸನ್ನಿಧಿಗೆ ತೆರಳಿ ನೀರು ಹಾಕಿ ಪೂಜೆ ಸಲ್ಲಿಸಿ ಮಳೆಯಿಗಾಗಿ ಬೇಡಿಕೆ ಇಟ್ಟರು.

ಈ ಸಂಪ್ರದಾಯದಲ್ಲಿ ರೈತರಾದ ಬಾಪೂಗೌಡ ಪಾಟೀಲ, ಹನಮಂತಪ್ಪ ಹೂಗಾರ, ಈರಯ್ಯ ಹಿರೇಮಠ, ಮಲ್ಲಪ್ಪ ದೇವರೊಳ್ಳಿ, ಅಜ್ಜಪ್ಪ ಪಾಟೀಲ, ರುದ್ರಗೌಡ ಪಾಟೀಲ, ಫಕ್ಕಿರೇಶ ಚಿಕ್ಕಗಸಿ, ಜೋಗಮ್ಮ ದುರಗಣ್ಣವರ, ಚಿನ್ನಮ್ಮ ದುರಗಣ್ಣವರ, ಗಿರಿಜವ್ವ ಹೂಗಾರ, ಲಕ್ಷ್ಮವ್ವ ದೊಡ್ಡಮನಿ, ನೀಲವ್ವ ಪಾಟೀಲ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ಜೈ ಹೋ ಕರ್ನಾಟಕ ಪರಿವರ್ತನ ವೇದಿಕೆ ಹಾಗೂ ಸಿಟಿ ಯೂತ್ ಅಸೋಸಿಯೇಷನ್ ವತಿಯಿಂದ ವಿಶೇಷ ಕಾರ್ಯಕ್ರಮ

# ತಯ್ಯಬ ಕುನ್ನಿಬಾವಿ 62ನೇ ಹುಟ್ಟುಹಬ್ಬ ಸಂಭ್ರಮಾಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಜೈ ಹೋ ಕರ್ನಾಟಕ ಪರಿವರ್ತನ ವೇದಿಕೆ ಹಾಗೂ ಸಿಟಿ ಯೂತ್ ಅಸೋಸಿಯೇಷನ್, ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಕಾಂಗ್ರೆಸ್ ಮುಖಂಡರು, ಸಮಾಜಸೇವಕರು ಹಾಗೂ ಗಣ್ಯ ವ್ಯಾಪಾರಿಗಳಾದ ಜನಾಬ ತಯ್ಯಬ ಕುನ್ನಿಬಾವಿ ಅವರ 62ನೇ ಹುಟ್ಟುಹಬ್ಬವನ್ನು ಜೆಎಂಎಫ್ ಕಾರ್ಯಾಲಯದಲ್ಲಿ ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಜೈ ಹೋ ಕರ್ನಾಟಕ ಪರಿವರ್ತನ ವೇದಿಕೆಯ ರಾಜ್ಯಾಧ್ಯಕ್ಷ ಇರ್ಫಾನ್ ಡಂಬಳ ಮಾತನಾಡಿ, ತಯ್ಯಬ ಕುನ್ನಿಬಾವಿ ಅವರ ಜೀವನ ಪಯಣ, ಸಮಾಜಮುಖಿ ಚಿಂತನೆ ಹಾಗೂ ಅವರು ನಡೆದು ಬಂದ ದಾರಿಯ ಕುರಿತು ವಿಸ್ತಾರವಾಗಿ ವಿವರಿಸಿದರು. ಹಿರಿಯರ ಮಾರ್ಗದರ್ಶನ ಮತ್ತು ಅನುಭವ ಇಂದಿನ ಯುವಜನತೆಗೆ ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು.

ಯೂನಿಕ್ ಇನ್ಸಾ ಹಾರೂನ್ ಎಜುಕೇಶನ್ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಅಸ್ಲಾಂ ನರೆಗಲ್ ಶುಭಾಶಯ ಕೋರಿ, "ನಾನು ಊರಿನಲ್ಲಿ ಇಲ್ಲದಿದ್ದರೂ ಸ್ನೇಹಿತರು ಸೇರಿ ತಯ್ಯಬ ಕುನ್ನಿಬಾವಿ ಅವರ ಹುಟ್ಟುಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಿರುವುದು ಸಂತಸದ ಸಂಗತಿ" ಎಂದು ಹೇಳಿದರು.

ದತ್ತಾ ಗ್ರೂಪ್ ನಿರ್ದೇಶಕರು ಹಾಗೂ ಜೆಎಂಎಫ್ ಡೆವಲಪರ್ಸ್ ಸಂಸ್ಥಾಪಕರಾದ ಜಹೀರ್ ತಾಡಪತ್ರಿ ಮಾತನಾಡಿ, "ತಯ್ಯಬ ಅಣ್ಣಾವರೊಂದಿಗೆ ಕಳೆದ 25 ವರ್ಷಗಳಿಂದ ಉತ್ತಮ ಸ್ನೇಹ ಸಂಬಂಧವಿದೆ. ಅವರು ದೂರದೃಷ್ಟಿಯ ನಾಯಕರು. ಮುಂದಿನ ದಿನಗಳಲ್ಲಿಯೂ ನಮ್ಮ ಸ್ನೇಹ ಹೀಗೆ ಮುಂದುವರಿಯಲಿದೆ. ಅವರು ಕಂಡ ಕನಸುಗಳು ಮತ್ತು ಆಶಯಗಳು ಯಶಸ್ವಿಯಾಗಲಿ" ಎಂದು ಹಾರೈಸಿದರು.

ಸಿಟಿ ಯೂತ್ ಅಸೋಸಿಯೇಷನ್ ಅಧ್ಯಕ್ಷ ಮುಸ್ತಕಿಮ ಶಿರಹಟ್ಟಿ ಮಾತನಾಡಿ, "ತಯ್ಯಬ ಕುನ್ನಿಬಾವಿ ಅವರು ಶಿಸ್ತಿನ ಸಿಪಾಯಿ ಹಾಗೂ ಬಡವರ ಪರ ಕಾಳಜಿ ಹೊಂದಿದ ನಾಯಕರು. ಎಲ್ಲ ಸಮಾಜದವರೊಂದಿಗೆ ಸ್ನೇಹಭಾವದಿಂದ ನಡೆದುಕೊಂಡು ಬಂದಿರುವ ಅವರಿಗೆ ದೇವರು ಉತ್ತಮ ಆರೋಗ್ಯ, ಆಯುಷ್ಯ ಹಾಗೂ ಇನ್ನಷ್ಟು ಶಕ್ತಿ ನೀಡಲಿ" ಎಂದು ಶುಭ ಕೋರಿದರು.

ಗದಗ ಶಹರ್ ಬ್ಲಾಕ್ ಯುವ ಕಾಂಗ್ರೆಸ್ ಸಮಿತಿಯ ಮಾಜಿ ಅಧ್ಯಕ್ಷ ಸರಪರಾಜ್ ಬಬರ್ಚಿ ಮಾತನಾಡಿ, "ತಯ್ಯಬ ಕುನ್ನಿಬಾವಿ ಅವರ ಸಾಮಾಜಿಕ ಹಾಗೂ ರಾಜಕೀಯ ಜೀವನದಲ್ಲಿ ಇನ್ನಷ್ಟು ಬೆಳವಣಿಗೆ ಆಗಲಿ. ಕಾಂಗ್ರೆಸ್ ಪಕ್ಷದಲ್ಲಿ ಮುಂದಿನ ದಿನಗಳಲ್ಲಿ ಅವರಿಗೆ ಹೆಚ್ಚಿನ ಸ್ಥಾನಮಾನ ದೊರೆಯಲಿ" ಎಂದು ಆಶಿಸಿದರು.

ಈ ಸಂದರ್ಭದಲ್ಲಿ ಶಫಿ ಡಂಬಳ, ಜಂದಿಸಾಬ ಬಳ್ಳಾರಿ, ಖಲೀಲ್ ಬಳ್ಳಾರಿ, ಮುದಸರ್ ಬಳ್ಳಾರಿ, ಫಾರೂಕ್ ಬಬರ್ಚಿ, ಜಿಲಾನಿ ಬಳ್ಳಾರಿ, ಬಿಜೆಪಿ ಮುಖಂಡರಾದ ಬಾಬುಸಾಬ್ ಎಲಗಾರ, ಶೌಕತ್ ಕಾಗದಗಾರ, ವೆಂಕಟೇಶ್ ಪೂಜಾರಿ, ಸಂಗಮೇಶ್ ಅಣ್ಣಾ ಅಜ್ಜ, ರಾಮಣ್ಣ ಭರಂಗೌಡ್ರು, ನಾಗನೂರ ಸೌವಕಾರ, ಮುಜಮಿಲ್ ಮುಲ್ಲಾ, ಫಯಾಜ್ ನರೆಗಲ್, ಆದಿಲ್ ಶಾ ಅಣ್ಣಿಗೇರಿ, ಜಂದೀಸಾಬ್ ಮನಿಯರ್, ಮಕ್ಸೂದ್ ಮಾನ್ವಿ, ದೇವರಾಜ್ ಮೇದಾರ, ಅಮನ್ ಗೋವಾ, ಹೈದರಅಲಿ ತಾಡಪತ್ರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಪ್ರಾಧ್ಯಾಪಕರ ಮುಷ್ಕರಿಗೆ ಶಾಸಕ ಸಂಕನೂರ ಬೆಂಬಲ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಪಶುವೈದ್ಯಕೀಯ ವಿಶ್ವವಿದ್ಯಾಲಯಗಳ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಧ್ಯಾಪಕರಿಗೆ ಕಳೆದ ಏಳು ವರ್ಷಗಳಿಂದ ನೀಡಲಾಗುತ್ತಿದ್ದ ನಾನ್ ಪ್ರಾಕ್ಟಿಸಿಂಗ್ ಅಲವನ್ಸ್ (ಎನ್.ಪಿ.ಎ) ಅನ್ನು ನಿಲ್ಲಿಸಿರುವ ಸರ್ಕಾರದ ಆದೇಶವನ್ನು ವಿರೋಧಿಸಿ ನಡೆಯುತ್ತಿರುವ ಮುಷ್ಕರಿಗೆ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅವರು ಬೆಂಬಲ ವ್ಯಕ್ತಪಡಿಸಿದರು.

ನಗರದ ಪಶುವೈದ್ಯಕೀಯ ಮಹಾವಿದ್ಯಾಲಯದಲ್ಲಿ ರಾಜ್ಯಮಟ್ಟದ ಶಿಕ್ಷಕರ ಸಂಘಟನೆಯವರು ಹಮ್ಮಿಕೊಂಡಿದ್ದ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ, ಮಾತನಾಡುತ್ತಾ, ಕೇಂದ್ರದ ಐಸಿಎಆರ್ ನಿಯಮಗಳಡಿ ಹಾಗೂ ಸಂಪುಟದ ನಿರ್ಣಯದಂತೆ ಇದುವರೆಗೆ ಮೂಲ ವೇತನದ ಶೇ. 20ರಷ್ಟು ನೀಡಲಾಗುತ್ತಿದ್ದ ಎನ್.ಪಿ.ಎ ಭತ್ಯೆಯನ್ನು ಏಕಾಏಕಿ ರದ್ದುಪಡಿಸಿರುವುದು ಅನ್ಯಾಯದ ಕ್ರಮವಾಗಿದೆ ಎಂದು ಆಕ್ಷೇಪಿಸಿದರು.

ಈ ಆದೇಶವನ್ನು ತಕ್ಷಣವೇ ಹಿಂಪಡೆಯುವಂತೆ ಸರ್ಕಾರವನ್ನು ಒತ್ತಾಯಿಸಿದ ಅವರು, ಪಶುವೈದ್ಯಕೀಯ ಸಚಿವರಿಗೆ ಪತ್ರ ಬರೆದು ನ್ಯಾಯ ಒದಗಿಸಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಶಿಕ್ಷಕರ ಸಂಘಟನೆಯ ಸ್ಥಳೀಯ ಸಂಘಟನಾ ಕಾರ್ಯದರ್ಶಿ ಡಾ. ವಿನಯ ಟಿಕಾರೆ ಮಾತನಾಡಿ, ಸಮಸ್ಯೆಯ ಕುರಿತು ವಿವರಿಸಿದರು. ಪಶುವೈದ್ಯಕೀಯ ಮಹಾವಿದ್ಯಾಲಯದ ಡೀನ್ ಡಾ. ರಾಮಚಂದ್ರ ಹಾಗೂ ಕರ್ನಾಟಕ ಚಿತ್ರಕಲಾ ಮಹಾವಿದ್ಯಾಲಯಗಳ ಸಿಬ್ಬಂದಿ ಸಂಘದ ರಾಜ್ಯಾಧ್ಯಕ್ಷ ಡಾ. ಬಿ.ಎಲ್. ಚವ್ಹಾಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮೂರು ರಾಜ್ಯಗಳಲ್ಲಿ ಬಿಜೆಪಿ ಜಯಭೇರಿ: ಜಕ್ಕಲಿಯಲ್ಲಿ ಸಂಭ್ರಮ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಶ್ಚಿಮ ಬಂಗಾಳ, ಅಸ್ಸಾಂ ಹಾಗೂ ಪುದುಚೇರಿ ರಾಜ್ಯಗಳ ವಿಧಾನಸಭಾ ಚುನಾವಣೆಯಲ್ಲಿ ಭಾರತೀಯ ಜನತಾ ಪಕ್ಷ (ಬಿಜೆಪಿ) ಜಯ ಸಾಧಿಸಿದ ಹಿನ್ನೆಲೆಯಲ್ಲಿ ಸಮೀಪದ ಜಕ್ಕಲಿ ಗ್ರಾಮದಲ್ಲಿ ಬಿಜೆಪಿ ಕಾರ್ಯಕರ್ತರು ವಿಜಯೋತ್ಸವವನ್ನು ಅದ್ಧೂರಿಯಾಗಿ ಆಚರಿಸಿದರು.



ಗ್ರಾಮದ ಬಸ್ ನಿಲ್ದಾಣದ ಸಮೀಪ ಜಮಾಯಿಸಿದ ಕಾರ್ಯಕರ್ತರು ಪಟಾಕಿ ಸಿಡಿಸಿ, ಪರಸ್ಪರ ಸಿಹಿ ಹಂಚಿಕೊಂಡು ಸಂಭ್ರಮಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರ ಪರವಾಗಿ ಘೋಷಣೆಗಳನ್ನು ಕೂಗಿ, ಗ್ರಾಮದಲ್ಲಿ ವಿಜಯೋತ್ಸವದ ವಾತಾವರಣ ಸೃಷ್ಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ರೋಣ ಬಿಜೆಪಿ ಮಂಡಲದ ಮಾಜಿ ಅಧ್ಯಕ್ಷ ಮುತ್ತಣ್ಣ ಕಡಗದ ಅವರು, "ಈ ಫಲಿತಾಂಶವು ಪ್ರಧಾನಿ ನರೇಂದ್ರ ಮೋದಿ ಅವರ ದಕ್ಷ ನಾಯಕತ್ವ ಹಾಗೂ ಕೇಂದ್ರ ಸರ್ಕಾರದ ಜನಪರ ಯೋಜನೆಗಳಿಗೆ ಜನರು ನೀಡಿದ ಬೆಂಬಲದ ಪ್ರತಿಫಲವಾಗಿದೆ. ಮುಂಬರುವ ಚುನಾವಣೆಗೆ ಇದು ದಿಕ್ಸೂಚಿಯಾಗಿದ್ದು, ಅಭಿವೃದ್ಧಿಯ ರಾಜಕಾರಣವನ್ನು ಜನತೆ ಮೆಚ್ಚಿಕೊಂಡಿದ್ದಾರೆ ಎಂಬುದಕ್ಕೆ ಸಾಕ್ಷಿಯಾಗಿದೆ," ಎಂದು ಹೇಳಿದರು.

ಈ ವೇಳೆ ಮುಖಂಡರಾದ ಶಿವನಾಗಪ್ಪ ದೊಡ್ಡಮೇಟಿ, ಚೆನ್ನಬಸವ ಕೊಪ್ಪದ, ಶೇಖಪ್ಪ ಮಾರನಬಸರಿ, ಜಗದೀಶ ಪಲ್ಲೇದ, ಮಲ್ಲಪ್ಪ ಪಲ್ಲೇದ, ವಿನಾಯಕ ಉಮತಾರ, ಶಿವಕುಮಾರ್ ಸ್ಟ್ಯಾಂಪಿನ್, ಶರಣಪ್ಪ ಕೋರಿ, ಮಂಜುನಾಥ ವಾಲಿ, ಮಲ್ಲಪ್ಪ ಪಟ್ಟಣಶೆಟ್ಟಿ, ವೀರಭದ್ರಪ್ಪ ಚಿನ್ನೂರ, ನಾಗರಾಜ ಸೋಮನಕಟ್ಟಿ, ಆದಾಮಸಾಬ ಬಾಲೇಸಾಬನವರ, ನಾಗರಾಜ ಸಂಗನಬಶೆಟ್ರ ಸೇರಿದಂತೆ ಅನೇಕ ಕಾರ್ಯಕರ್ತರು ಮತ್ತು ಅಭಿಮಾನಿಗಳು ಭಾಗವಹಿಸಿದ್ದರು.

**ಮೇ 8ರಿಂದ 10ರವರೆಗೆ ವಿಶೇಷ ಅಭಿಯಾನ; ಮತದಾರರು ಹೆಸರು ಮ್ಯಾಪಿಂಗ್ ಖಚಿತಪಡಿಸಿಕೊಳ್ಳಲು ಕರೆ**

# ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯಲ್ಲಿ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಕೈಗೊಳ್ಳಲಾಗುತ್ತಿದ್ದು, 2025ರ ಮತದಾರರ ಪಟ್ಟಿಯಲ್ಲಿರುವ ಮತದಾರರನ್ನು 2002ರ ಮತದಾರರ ಪಟ್ಟಿಗೆ ತಾಳೆ ಮಾಡುವ (ಮ್ಯಾಪಿಂಗ್ ಮತ್ತು ಪ್ರೊಫೈಲಿಂಗ್) ಕಾರ್ಯ ನಡೆಯುತ್ತಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಸ್ನೇಹಲ್ ಆರ್. ತಿಳಿಸಿದ್ದಾರೆ.

2025ರ ಮತದಾರರ ಪಟ್ಟಿಯಲ್ಲಿರುವ 40 ವರ್ಷ ಮತ್ತು ಅದಕ್ಕಿಂತ ಮೇಲ್ಪಟ್ಟ ಮತದಾರರು ಹಾಗೂ ಅವರ ಕುಟುಂಬ ಸದಸ್ಯರನ್ನು 2002ರ ಮತದಾರರ ಪಟ್ಟಿಗೆ ಮ್ಯಾಪಿಂಗ್ ಮಾಡಿದಲ್ಲಿ ಪೂರಕ ದಾಖಲೆಗಳ ಅಗತ್ಯವಿಲ್ಲದೆ ಹೊಸ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ ಮಾಡಬಹುದಾಗಿದೆ ಎಂದು ತಿಳಿಸಿದ್ದಾರೆ.

ಮೇ 06ರವರೆಗೆ ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳಲ್ಲಿ ಮ್ಯಾಪಿಂಗ್ ಕಾರ್ಯದಲ್ಲಿ ಶೇ. 65.80 ಹಾಗೂ ಪ್ರೊಫೈಲಿಂಗ್‌ನಲ್ಲಿ ಶೇ. 108.52 ಪ್ರಗತಿ ಸಾಧಿಸಲಾಗಿದೆ. ಉಳಿದ ಮತದಾರರಿಗಾಗಿ ಮೇ 8ರಿಂದ 10ರವರೆಗೆ ಬೆಳಗ್ಗೆ 8ರಿಂದ ಸಂಜೆ 6ರವರೆಗೆ ವಿಶೇಷ ಅಭಿಯಾನ ನಡೆಸಲಾಗುವುದು ಎಂದು ಡಿಸಿ ತಿಳಿಸಿದ್ದಾರೆ.

> ಮತದಾರರು ತಮ್ಮ ಹೆಸರುಗಳು ಮ್ಯಾಪಿಂಗ್ ಮತ್ತು ಪ್ರೊಫೈಲಿಂಗ್ ಆಗಿರುವುದನ್ನು ಖಚಿತಪಡಿಸಿಕೊಳ್ಳಬೇಕು. ತಪ್ಪಿದಲ್ಲಿ ವಿಶೇಷ ಸಮಗ್ರ ಪರಿಷ್ಕರಣೆಯ ವೇಳೆ ದಾಖಲೆ ಸಲ್ಲಿಸಿ ಹೆಸರು ಸೇರ್ಪಡೆ ಮಾಡಿಸಬೇಕು.
> – ಸ್ನೇಹಲ್ ಆರ್. ಜಿಲ್ಲಾಧಿಕಾರಿ

# ಮೇ 10ರಂದು ಹೇಮರಡ್ಡಿ ಮಲ್ಲಮ್ಮ ಜಯಂತಿ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿ–2026 ಕಾರ್ಯಕ್ರಮವನ್ನು ಮೇ 10ರಂದು ಬೆಳಗ್ಗೆ 10.30 ಗಂಟೆಗೆ ನಗರದ ಎಪಿಎಂಸಿ ಯಾರ್ಡ್‌ನ ಕೆ.ಎಚ್. ಪಾಟೀಲ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮಕ್ಕೆ ಬಸವರಾಜ ಹೊರಟ್ಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ ಎಸ್. ತಂಗಡಗಿ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಹಾಗೂ ಪ್ರದೀಪ ಶೆಟ್ಟರ ಭಾಗವಹಿಸಲಿದ್ದಾರೆ.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಹಾಗೂ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎಂ.ವಿ. ವೆಂಕಟೇಶ್ ಹಾಗೂ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಶ್ರೀಮತಿ ಜಾನಕಿ ಕೆ.ಎಂ ಭಾಗವಹಿಸಲಿದ್ದಾರೆ.

ಶಿರಹಟ್ಟಿಯ ಲೇಖಕಿ ಹಾಗೂ ಉಪನ್ಯಾಸಕಿ ಶ್ರೀಮತಿ ಸುಧಾ ಹುಚ್ಚಣ್ಣವರ ಅವರು "ಶಿವಶರಣೆ ಹೇಮರಡ್ಡಿ ಮಲ್ಲಮ್ಮರ ಜೀವನ ಮತ್ತು ಸಂದೇಶ" ವಿಷಯವಾಗಿ ಉಪನ್ಯಾಸ ನೀಡಲಿದ್ದಾರೆ.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್. ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ವಿ. ಬಳ್ಳಾರಿ ಸರ್ವರಿಗೂ ಸ್ವಾಗತ ಕೋರಿದ್ದಾರೆ.

# ಮೇ 11ರಂದು "ಧರ್ಮದ ನುಡಿ ಬೆಂಕಿಯ ಕಿಡಿ" ನಾಟಕ ಪ್ರದರ್ಶನ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹಜರತ್ ರಹಿಮಾನ ಶ್ಯಾವಲಿ ಶರಣರ ಉರುಸಿನ ಅಂಗವಾಗಿ ಶ್ರೀ ಕಟ್ಟಿಬಸವೇಶ್ವರ ನಾಟ್ಯ ಸಂಘದ ವತಿಯಿಂದ ಮೇ 11ರಂದು ರಾತ್ರಿ 10 ಗಂಟೆಗೆ "ಧರ್ಮದ ನುಡಿ ಬೆಂಕಿಯ ಕಿಡಿ" ಅರ್ಥಾತ್ "ಅನಾಥ ಕಟ್ಟಿದ ಅರಿಶಿಣ ತಾಳಿ" ನಾಟಕ ಪ್ರದರ್ಶನ ಜರುಗಲಿದೆ.

ಹಿರೇಬೂದಿಹಾಳದ ಡಿ.ಆರ್. ಪೂಜಾರ ವಿರಚಿತ ಈ ನಾಟಕವು ಉರುಸು ಕಾರ್ಯಕ್ರಮದ ಅಂಗವಾಗಿ ಆಯೋಜಿಸಲಾಗಿದ್ದು, ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು ಹಾಗೂ ನರೇಗಲ್ಲ ದರ್ಗಾದ ಮಂಜೂರ ಹುಸೇನ ಶ್ಯಾವಲಿ ಶರಣರು ಸಾನ್ನಿಧ್ಯ ವಹಿಸಲಿದ್ದಾರೆ.

ನಿವೃತ್ತ ಶಿಕ್ಷಕ ಮಲ್ಲನಗೌಡ ಪಾಯಪ್ಪಗೌಡ್ರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ.

**ಪಶ್ಚಿಮ ಬಂಗಾಳ ಜನಾದೇಶವನ್ನು ಗೌರವಿಸಬೇಕು; ಗದಗದಲ್ಲಿ ಮಾಜಿ ಸಿಎಂ ಶೆಟ್ಟರ್ ಹೇಳಿಕೆ**

# ಮಮತಾ ಬ್ಯಾನರ್ಜಿ ನಿಲುವು ಮೂರ್ಖತನದ ಪರಮಾವಧಿ

■ವಿಜಯಸಾಕ್ಷಿ ಸುದ್ದಿ, ಗದಗ

"ಪಶ್ಚಿಮ ಬಂಗಾಳದ ಜನರು ಭಾರತೀಯ ಜನತಾ ಪಕ್ಷಕ್ಕೆ 206 ಶಾಸಕರನ್ನು ಆಯ್ಕೆ ಮಾಡಿ ಸ್ಪಷ್ಟ ಜನಾದೇಶ ನೀಡಿದ್ದಾರೆ. ಇದನ್ನು ಒಪ್ಪಿಕೊಂಡು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡದೆ ಮೊಂಡುತನ ತೋರಿಸುತ್ತಿರುವ ಮಮತಾ ಬ್ಯಾನರ್ಜಿ ಅವರ ನಿಲುವು ಮೂರ್ಖತನದ ಪರಮಾವಧಿಯಾಗಿದೆ" ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾಲಿ ಸಂಸದ ಜಗದೀಶ ಶೆಟ್ಟರ್ ಆರೋಪಿಸಿದರು.

ಗದಗ ನಗರದಲ್ಲಿ ಬುಧವಾರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಕಳೆದ 15 ವರ್ಷಗಳಿಂದ ಪಶ್ಚಿಮ ಬಂಗಾಳದಲ್ಲಿ ಆಡಳಿತ ನಡೆಸಿದ ಮಮತಾ ಬ್ಯಾನರ್ಜಿ ಸರ್ಕಾರದ ವಿರುದ್ಧ ಜನರು ಬೇಸತ್ತು ಪ್ರಧಾನಿ ನರೇಂದ್ರ ಮೋದಿ ಅವರ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ಬಿಜೆಪಿಗೆ ಎರಡು ಮೂರಾಂಶ ಬಹುಮತ



ನೀಡಿದ್ದಾರೆ ಎಂದು ಹೇಳಿದರು.

"100 ಕ್ಷೇತ್ರಗಳಲ್ಲಿ ಮತಚೌರಿ ನಡೆದಿದೆ" ಎಂಬ ಮಮತಾ ಬ್ಯಾನರ್ಜಿ ಆರೋಪವನ್ನು ಬೆಂಬಲಿಸಿರುವ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ನಡೆ ದಿವಾಳಿತನದ ಪರಮಾವಧಿ ಎಂದು ಟೀಕಿಸಿದ ಅವರು, ಜನಾದೇಶವನ್ನು ಗೌರವಿಸುವುದು ಪ್ರತಿಯೊಬ್ಬ ಚುನಾಯಿತ ಸರ್ಕಾರದ ಜವಾಬ್ದಾರಿಯಾಗಿದೆ ಎಂದರು.

ಇದೇ ತಿಂಗಳ 9ರಂದು ಚಿತ್ರದುರ್ಗದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ರಾಜಕೀಯ ಜೀವನದ 50 ವರ್ಷಗಳ ಸಂಭ್ರಮಾಚರಣೆಯ ಅಂಗವಾಗಿ "ಅಭಿಮಾನೋತ್ಸವ" ಕಾರ್ಯಕ್ರಮ ನಡೆಯಲಿದ್ದು, ಗದಗ ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಭಾಗವಹಿಸಬೇಕು ಎಂದು ಮನವಿ ಮಾಡಿದರು.

> ಪಶ್ಚಿಮ ಬಂಗಾಳದ ಜನರು ಟಿಎಂಸಿಯ ಗುಂಡಾಗಿರಿ ಮತ್ತು ಕೇಂದ್ರ ಸರ್ಕಾರದ ಯೋಜನೆಗಳನ್ನು ಜಾರಿಗೆ ತರದ ಆಡಳಿತಕ್ಕೆ ತಕ್ಕ ಪಾಠ ಕಲಿಸಿದ್ದಾರೆ.
> – ಜಗದೀಶ ಶೆಟ್ಟರ್, ಮಾಜಿ ಮುಖ್ಯಮಂತ್ರಿ

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ಜಿಲ್ಲಾ ವಕ್ತಾರ ಎಂ.ಎಮ್. ಹಿರೇಮಠ, ಮಾಜಿ ಪ್ರಾಧಿಕಾರದ ಅಧ್ಯಕ್ಷ ಸಂಗಮೇಶ ದುಂದೂರ, ತೊಟೊಸೊ ಭಾಂಡಗೆ, ನಗರಾಧ್ಯಕ್ಷ ಸುರೇಶ ಮರಳಪ್ಪನವರ, ಕೆ.ಪಿ. ಕೋಟಿಗೌಡ್ರ, ರಮೇಶ ಸಜ್ಜಗಾರ, ಮಂಜುನಾಥ ಶಾಂತಗೇರಿ, ರವಿ ಮಾನ್ವಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಗದಗ ತಾಲೂಕ ಪ್ರಾಥಮಿಕ ಶಿಕ್ಷಕರ ಸಂಘ ಚುನಾವಣೆ: 13 ಸ್ಥಾನಗಳಲ್ಲಿ 12ಕ್ಕೆ ಜಯ**

# ಹಿರೇಮಠ–ಬಂಡಿ ತಂಡಕ್ಕೆ ಭಾರೀ ಗೆಲುವು



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಗದಗ ಗ್ರಾಮೀಣ ತಾಲೂಕು ಘಟಕದ 13 ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ವಿ.ಎಂ. ಹಿರೇಮಠ ಹಾಗೂ ಎಸ್.ಆರ್. ಬಂಡಿ ಅವರ ತಂಡ ಭರ್ಜರಿ ಜಯ ಸಾಧಿಸಿದೆ. ಒಟ್ಟು 13 ಸ್ಥಾನಗಳಲ್ಲಿ 12 ಸ್ಥಾನಗಳನ್ನು ಗೆದ್ದು ಸಂಘದಲ್ಲಿ ಪ್ರಭಾವಿ ಮೇಲುಗೈ ಸಾಧಿಸಿದೆ ಎಂದು ಚುನಾವಣಾಧಿಕಾರಿ ವಿ.ಎಂ. ಪಾಟೀಲ ತಿಳಿಸಿದ್ದಾರೆ.

ಅತ್ಯಂತ ತುರುಸಿನಿಂದ ನಡೆದ ಚುನಾವಣೆಯಲ್ಲಿ ಗೆಲುವು ಸಾಧಿಸಿದ ಅಭ್ಯರ್ಥಿಗಳಿಗೆ ಸೋಮವಾರ ನಗರದ ಸರ್ಕಾರಿ ಶಾಲೆ ನಂ. 6ರಲ್ಲಿ ಕಾರ್ಯನಿರ್ವಹಿಸಿದ್ದ ಚುನಾವಣಾ ಕಚೇರಿಯಲ್ಲಿ ಪ್ರಮಾಣಪತ್ರ ವಿತರಿಸಿ ಅಭಿನಂದಿಸಲಾಯಿತು.

ಚುನಾವಣೆಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಹೀಗಿದ್ದಾರೆ: ಎಸ್. ಆರ್. ಬಂಡಿ (375 ಮತಗಳು), ಬಿ.ವೈ. ಹುಡೇದಮನಿ (356), ಎಸ್.ಎಸ್. ಲಕ್ಷಕೊಪ್ಪ (349), ವಿ.ಎಂ. ಹಿರೇಮಠ (337), ಎನ್. ಎಚ್. ಪಾಟೀಲ (310), ಬಿ.ಬಿ. ಹಡಪದ (279), ಎಸ್.ಪಿ. ಕುರಿ (233), ಎಸ್.ಎಂ. ಉಜ್ಜಣ್ಣವರ (217).

ಮಹಿಳಾ ಮೀಸಲು ವಿಭಾಗದ ನಾಲ್ಕು ಸ್ಥಾನಗಳಿಗೆ ಎಸ್.ಎನ್. ಅನ್ಸಾರಿ (308), ಎಸ್.ಡಿ. ಗುಂಜಳ (299), ಎನ್.ಆರ್. ಶೈಲಾ (268), ಐ.ಕೆ. ಮೊಟಗಿ (261) ಮತಗಳನ್ನು ಪಡೆದು ಆಯ್ಕೆಯಾಗಿದ್ದಾರೆ.

ಈ ಸಂದರ್ಭದಲ್ಲಿ ಕೆ.ಬಿ. ಕೊಣ್ಣೂರ, ಕೆ.ಪಿ. ಹಳ್ಯಾಳ, ಜಿ.ಎಸ್. ಗೌಡರ, ಎ.ಎಂ. ಸುಳ್ಳದ, ಎಸ್.ಐ. ನಾಯ್ಕರ್, ಎಂ.ಡಿ. ಬಳಗಾನೂರ, ಎಂ.ಪಿ. ಮೆಣಸಿನಕಾಯಿ, ಬಿ.ಎಸ್. ತಮ್ಮನಗೌಡ್ರ, ಪಿ.ಎಫ್. ಅಗಸಿಮನಿ, ಪಿ. ಈರಪ್ಪ, ಪಿ.ಎಸ್. ಗಾಣಿಗೇರ, ಪಿ.ಬಿ. ಮುಧೋಳಮಠ, ಎಸ್.ಐ. ಬಡಿಗೇರ, ಡಿ.ಕೆ. ಗುಂಜಾಳ, ಐ.ಎಚ್. ಹಳ್ಯಾಳ, ಬಿ.ಎಸ್. ಗೋಡಿ, ಎಸ್.ಪಿ. ಕೊಪ್ಪದ ಸೇರಿದಂತೆ ಹಲವರು ಆಯ್ಕೆಯಾದ ಅಭ್ಯರ್ಥಿಗಳನ್ನು ಸನ್ಮಾನಿಸಿ ಗೌರವಿಸಿದರು.

# ತೋಂಟದಾರ್ಯ ಜಾತ್ರೆ ಅವಘಡ: ಗಾಯಾಳುಗಳಿಗೆ ಸಂಕನೂರ ಸಾಂತ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ



ಇತ್ತೀಚೆಗೆ ನಡೆದ ತೋಂಟದಾರ್ಯ ಜಾತ್ರಾ ಮಹೋತ್ಸವ ವೇಳೆ ಡ್ಯಾನ್ಸಿಂಗ್ ಪ್ಲೇ ಜೋಕಾಲಿಯಲ್ಲಿ ತಾಂತ್ರಿಕ ದೋಷ ಉಂಟಾಗಿ ಸಂಭವಿಸಿದ ದುರ್ಘಟನೆಯಲ್ಲಿ ಗಾಯಗೊಂಡು ನಗರದ ಕೆ.ಎಚ್. ಪಾಟೀಲ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಗಾಯಾಳುಗಳನ್ನು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಭೇಟಿ ಮಾಡಿ ಆರೋಗ್ಯ ವಿಚಾರಿಸಿದರು.

ದುರ್ಘಟನೆಯಲ್ಲಿ ಸುಮಾರು 18 ಮಂದಿ ಗಾಯಗೊಂಡಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವವರಿಗೆ ಸಾಂತ್ವಾನ ಹೇಳಿದ ಸಂಕನೂರ ಅವರು ವೈದ್ಯರೊಂದಿಗೆ ಚರ್ಚಿಸಿ ಅಗತ್ಯ ಚಿಕಿತ್ಸೆ ನೀಡುವಂತೆ ಮನವಿ ಮಾಡಿದರು.

ಆಸ್ಪತ್ರೆಯ ನಿರ್ದೇಶಕ ಬಸವರಾಜ ಬೊಮ್ಮನಹಳ್ಳಿ ಮಾತನಾಡಿ, "18 ಗಾಯಾಳುಗಳಲ್ಲಿ ಇಬ್ಬರಿಗೆ ಮಾತ್ರ ಹೆಚ್ಚಿನ ಚಿಕಿತ್ಸೆ ಅಗತ್ಯವಿದ್ದು, ಉಳಿದವರನ್ನು 3ರಿಂದ 4 ದಿನಗಳಲ್ಲಿ ಡಿಸ್ಚಾರ್ಜ್ ಮಾಡುವ ಸಾಧ್ಯತೆ ಇದೆ" ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಎಲುಬು–ಕೀಲು ತಜ್ಞ ವೈದ್ಯ ಮಹಾಂತೇಶ ಪಾಟೀಲ ಹಾಗೂ ಜನರಲ್ ಸರ್ಜನ್ ಸುನೀಲ ತೇಲಕರ ಅವರೊಂದಿಗೆ ಸಂಕನೂರ ಅವರು ಚರ್ಚಿಸಿ ಚಿಕಿತ್ಸೆಯ ಬಗ್ಗೆ ಮಾಹಿತಿ ಪಡೆದರು.

ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ನಗರಾಭಿವೃದ್ಧಿ ಮಾಜಿ ಅಧ್ಯಕ್ಷ ಸಿದ್ದಣ್ಣ ಪಲ್ಲೇದ, ರಮೇಶ ಸಜ್ಜಗಾರ, ವಕೀಲ ಕೆ.ಪಿ. ಕೋಟಿಗೌಡ್ರ, ಅಮರನಾಥ ಗಡಗಿ ಹಾಗೂ ರವಿ ಮಾನ್ವಿ ಉಪಸ್ಥಿತರಿದ್ದರು.

**ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ಪಿ. ಇಂದುಮತಿ**

# "ಮಾತೃಭಾಷೆಯಲ್ಲೇ ಶಿಕ್ಷಣ ಮನಸ್ಸಿಗೆ ಹತ್ತುವ ಜ್ಞಾನ"

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

"ಮಾತೃಭಾಷೆಯಲ್ಲೇ ಶಿಕ್ಷಣ ಪಡೆದಾಗ ಮಾತ್ರ ಜ್ಞಾನ ಮನಸ್ಸಿಗೆ ಹತ್ತುತ್ತದೆ. ಕನ್ನಡ ಭಾಷೆಯ ಮೂಲಕ ಮಕ್ಕಳಲ್ಲಿ ಚಿಂತನೆ ಮತ್ತು ಸಂಸ್ಕಾರ ಬೆಳೆಸಲು ಸಾಧ್ಯ" ಎಂದು ಪಿ. ಇಂದುಮತಿ ಹೇಳಿದರು.

ಪಟ್ಟಣದ ಶ್ರೀ ರೇಣುಕಾ ಪಿ.ಪೂ. ಕಾಲೇಜುನಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಹಮ್ಮಿಕೊಂಡಿದ್ದ ಕಸಾಪದ 112ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ತಾಲೂಕಿನಲ್ಲಿ ಕನ್ನಡ ಕಟ್ಟುವ ಕೆಲಸವನ್ನು ಕನ್ನಡ ಸಾಹಿತ್ಯ ಪರಿಷತ್ತು ನಿರಂತರವಾಗಿ ಮಾಡುತ್ತಿರುವುದು ಪ್ರಶಂಸನೀಯ ಎಂದು ಪಿ ಇಂದುಮತಿ ಹೇಳಿದರು.




ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಜೆ.ಎಂ. ವೀರಸಂಗಯ್ಯ ಮಾತನಾಡಿ, ವಿದ್ಯಾರ್ಥಿಗಳು ಜಾತಿ, ಮತ, ಪಂಥಗಳ ಸುಳಿಗೆ ಸಿಲುಕದೆ ಮಾನವೀಯ ಹಾಗೂ ವೈಜ್ಞಾನಿಕ ಚಿಂತನೆಗಳನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲೂಕು ಕಸಾಪ ಅಧ್ಯಕ್ಷ ಗೂಳಪ್ಪ ಹುಲಿಮನಿ ಮಾತನಾಡಿ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರನ್ನು ಗುರುತಿಸಿ ಗೌರವಿಸುವುದು ನಾಡಿನ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಹೆಚ್ಚಿಸುತ್ತದೆ ಎಂದರು.

ವಿದ್ಯಾರ್ಥಿಗಳು, ಪೋಷಕರು ಮತ್ತು ಗುರುಗಳಿಗೆ ವಿನೀತರಾಗಿದ್ದು ಜ್ಞಾನಾರ್ಜನೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿ.ಬಿ. ಮಲ್ಲೇಶ್, ಎಚ್. ಬೆಟ್ಟಪ್ಪ, ಎಲ್. ಚಂದ್ರನಾಯ್ಕ್, ಕಡ್ಲಿ ಗುರು ಬಸವರಾಜ್, ಪಿ.ಎಲ್.ಡಿ ಬ್ಯಾಂಕ್ ಕುಮಾರಸ್ವಾಮಿ, ಮಾಲ್ವಿ ಚಾಂದಪೀರ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಸಾಪ ಪದಾಧಿಕಾರಿಗಳಾದ ಬಿ. ಮಾರುತಿ, ಪಿ.ಜಿ. ಪ್ರಹ್ಲಾದ ಹಾಗೂ ಎಚ್. ಗಣೇಶರಾವ್ ಕಾರ್ಯಕ್ರಮ ನಿರ್ವಹಿಸಿದರು.

> ಈ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳ ಸಾಧಕರು ಹಾಗೂ ಸೇವಕರಾದ ಎ.ಎಂ. ವೀರಸಂಗಯ್ಯ, ಗೊಂದಲಿಗರ ರಾಮಣ್ಣ, ಕಿಂಡ್ರಿ ಲಕ್ಷ್ಮಿಪತಿ, ರೆಡ್ಡಿನಾಯ್ಕ್, ಕೃಷ್ಣಮೂರ್ತಿ, ಸಂಚಿ ಶಿವಕುಮಾರ್, ಹುರಕಡ್ಲಿ ಶಿವಕುಮಾರ್, ಕೆ.ಎಸ್. ಓಂಪ್ರಕಾಶ್, ಆನಂದ ಕಡ್ಲಿ, ತಳವಾರ ಕೊಟ್ರೇಶ್, ಪಿ. ಇಂದುಮತಿ, ಎನ್.ಆರ್. ಸುಧಾ ಹಾಗೂ ಜಿ.ಎಂ. ನಾಗಭೂಷಣಯ್ಯ ಅವರನ್ನು ಸನ್ಮಾನಿಸಲಾಯಿತು.

> ಕನ್ನಡ ಭಾಷೆಯ ಉಳಿವು ಮತ್ತು ಬೆಳವಣಿಗೆಗಾಗಿ ನಾಲ್ವಡಿ ಕೃಷ್ಣರಾಜ ಒಡೆಯರ್, ಸರ್ ಎಂ. ವಿಶ್ವೇಶ್ವರಯ್ಯ ಹಾಗೂ ಎಚ್.ವಿ. ನಂಜುಂಡಯ್ಯ ಅವರಂತಹ ಮಹನೀಯರು ಶ್ರಮಿಸಿದ್ದಾರೆ. ವಿದ್ಯಾರ್ಥಿಗಳು ಕನ್ನಡದ ಮಹತ್ವವನ್ನು ಅರಿತು ಭಾಷಾಭಿಮಾನ ಬೆಳೆಸಿಕೊಳ್ಳಬೇಕು.
> –ಸುಧಾ ಎನ್.ಆರ್. ಸಾಹಿತಿ

# ಮೇ 10ರಂದು ಯೋಗಾಸನ ಕ್ರೀಡಾಸಕ್ತರ ಸಮಾಲೋಚನಾ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಅಮೆಚೂರ್ ಯೋಗ ಕ್ರೀಡಾ ಸಂಸ್ಥೆ (ರಿ), ಬೆಂಗಳೂರು ಸಂಯೋಜನೆಯೊಂದಿಗೆ ಗದಗ ಜಿಲ್ಲಾ ಅಮೆಚೂರ್ ಯೋಗಾಸನ ಕ್ರೀಡಾ ಸಂಸ್ಥೆ (ರಿ), ಗದಗ ವತಿಯಿಂದ ಯೋಗಾಸನ ಕ್ರೀಡೆಯ ಪ್ರಸಾರ ಹಾಗೂ ಪ್ರಚಾರ ಕಾರ್ಯಯೋಜನೆ ರೂಪಿಸುವ ಹಿನ್ನೆಲೆಯಲ್ಲಿ ಮೇ 10ರಂದು, ಭಾನುವಾರ ಬೆಳಗ್ಗೆ 10.30 ಗಂಟೆಗೆ ಸಮಾಲೋಚನಾ ಸಭೆ ಆಯೋಜಿಸಲಾಗಿದೆ.

ನಗರದ ಶ್ರೀ ತೋಂಟದಾರ್ಯ ಮಠ ಆವರಣದಲ್ಲಿರುವ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಅನುಭವ ಮಂಟಪದಲ್ಲಿ ಸಭೆ ನಡೆಯಲಿದೆ.

ಸಭೆಯ ಅಧ್ಯಕ್ಷತೆಯನ್ನು ಭಾರತ ಸ್ವಾಭಿಮಾನ ಟ್ರಸ್ಟ್ ಗದಗ ಅಧ್ಯಕ್ಷ ರುದ್ರಣ್ಣ ಗುಳಗುಳಿ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಕರ್ನಾಟಕ ರಾಜ್ಯ ಅಮೆಚೂರ್ ಯೋಗ ಕ್ರೀಡಾ ಸಂಸ್ಥೆಯ ಅಧ್ಯಕ್ಷ ಡಾ. ಪಿ.ಎನ್. ಗಣೇಶಕುಮಾರ, ಕಾರ್ಯದರ್ಶಿ ಎ. ನಟರಾಜ ಹಾಗೂ ಗದಗ ಜಿಲ್ಲಾ ಯೋಗ ಒಕ್ಕೂಟದ ಅಧ್ಯಕ್ಷ ಎಂ.ಎಸ್. ಶಿರಿಯಣ್ಣವರ ಭಾಗವಹಿಸಲಿದ್ದಾರೆ.

ಸಭೆಗೆ ಗದಗ ಜಿಲ್ಲೆಯ ಯೋಗ ಸಂಘಟನೆಗಳ ಮುಖ್ಯಸ್ಥರು, ಯೋಗಾಸನ ಕ್ರೀಡಾ ತೀರ್ಪುಗಾರರು, ತರಬೇತುದಾರರು ಹಾಗೂ ಯೋಗಾಭಿಮಾನಿಗಳನ್ನು ಆಹ್ವಾನಿಸಲಾಗಿದೆ.

ಈ ಕುರಿತು ಸಂಸ್ಥೆಯ ಅಧ್ಯಕ್ಷ ಕೆ.ಎಸ್. ಪಲ್ಲೇದ ಹಾಗೂ ಕಾರ್ಯದರ್ಶಿ ಚೇತನ ಚುಂಚಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್.ಎಸ್.ಕೆ ಸಮಾಜದ ಪ್ರತಿಭಾವಂತರಿಗೆ ಪ್ರತಿಭಾ ಪುರಸ್ಕಾರ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಡಾ. ಎನ್.ವಿ. ಬದಿ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಎಸ್.ಎಸ್.ಕೆ ಸಮಾಜದ ಪ್ರತಿಭಾವಂತ ವಿದ್ಯಾರ್ಥಿ–ವಿದ್ಯಾರ್ಥಿನಿಯರಿಗೆ "ಪ್ರತಿಭಾ ಪುರಸ್ಕಾರ" ನೀಡಲು ನಿರ್ಧರಿಸಲಾಗಿದೆ.

ಬೆಟಗೇರಿ ಎಸ್.ಎಸ್.ಕೆ ಸಮಾಜದ ಆಶ್ರಯದಲ್ಲಿ ಜೂನ್ 7ರಂದು, ಭಾನುವಾರ ಬೆಳಗ್ಗೆ 10 ಗಂಟೆಗೆ ಶ್ರೀಮತಿ ಮುನ್ನುಬಾಯಿ ಈಶ್ವರಸಾ ಖೋಡೆ ಕಲ್ಯಾಣ ಮಂಟಪದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪುರಸ್ಕಾರ ಪ್ರದಾನ ಮಾಡಲಾಗುವುದು.

2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ (ಕಲಾ, ವಿಜ್ಞಾನ ಮತ್ತು ವಾಣಿಜ್ಯ) ಪರೀಕ್ಷೆಯಲ್ಲಿ ಶೇ. 90ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಅತ್ಯಧಿಕ ಅಂಕ ಗಳಿಸಿದ ವಿದ್ಯಾರ್ಥಿಗಳ ಅರ್ಜಿಗಳನ್ನು ಪ್ರತಿಭಾ ಪುರಸ್ಕಾರಕ್ಕೆ ಪರಿಗಣಿಸಲಾಗುವುದು. ಇದಲ್ಲದೆ ಬಿ.ಇ., ಎಂ.ಬಿ.ಬಿ.ಎಸ್., ಸಿ.ಎ., ಬಿ.ಎ., ಬಿ.ಎಸ್‌ಸಿ., ಬಿ.ಕಾಂ., ಯುಪಿಎಸ್ಸಿ ಹಾಗೂ ಸ್ನಾತಕೋತ್ತರ ಪದವಿಯ ಪ್ರಥಮ ಸೆಮಿಸ್ಟರ್‌ನಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೂ ನಗದು ರೂಪದಲ್ಲಿ ಪುರಸ್ಕಾರ ನೀಡಲಾಗುತ್ತದೆ. ಅರ್ಹ ವಿದ್ಯಾರ್ಥಿಗಳು ಅರ್ಜಿಯೊಂದಿಗೆ ಭಾವಚಿತ್ರ, ದೃಢೀಕೃತ ಅಂಕಪಟ್ಟಿ ಝೆರಾಕ್ಸ್, ಆಧಾರ್ ಕಾರ್ಡ್ ಪ್ರತಿಗಳು ಹಾಗೂ ಮೊಬೈಲ್ ಸಂಖ್ಯೆಯನ್ನು ಸೇರಿಸಿ ಮೇ 29, 2026ರೊಳಗಾಗಿ ಶ್ರೀ ಅಂಬಾಭವಾನಿ ದೇವಸ್ಥಾನ, ಬೆಟಗೇರಿ ಸಮಾಜದ ಕಾರ್ಯಾಲಯಕ್ಕೆ ಸಲ್ಲಿಸಬೇಕು ಎಂದು ಬೆಟಗೇರಿ ಎಸ್.ಎಸ್.ಕೆ ಸಮಾಜದ ಅಧ್ಯಕ್ಷ ಲೋಕನಾಥ ಕಬಾಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ದೇವದಾಸಿ ಪುನರ್ವಸತಿ ಯೋಜನೆಯಡಿ ಜಿಲ್ಲಾ ಘಟಕದ ಕಚೇರಿಗಳಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಯೋಜನಾಧಿಕಾರಿಗಳ ಹುದ್ದೆಗೆ ಎಂಎಸ್‌ಡಬ್ಲ್ಯು (MSW), ಎಂಎ ಸಮಾಜಶಾಸ್ತ್ರ (Sociology), ಎಂಎ ಅಥವಾ ಎಂಎಸ್‌ಸಿ ಮನೋವಿಜ್ಞಾನ (Psychology) ವಿದ್ಯಾರ್ಹತೆ ಹೊಂದಿರಬೇಕು. ಜೊತೆಗೆ ಕಡ್ಡಾಯವಾಗಿ ಕಂಪ್ಯೂಟರ್ ಜ್ಞಾನ ಇರಬೇಕು. ನಿವೃತ್ತ ಶಿಶು ಯೋಜನಾಧಿಕಾರಿಗಳು ಹಾಗೂ 65 ವರ್ಷ ವಯೋಮಿತಿಯೊಳಗಿನ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ಯೋಜನಾ ಅನುಷ್ಠಾನಾಧಿಕಾರಿಗಳ ಹುದ್ದೆಗೆ ಬಿಎಸ್‌ಡಬ್ಲ್ಯು (BSW), ಬಿಎ ಸಮಾಜಶಾಸ್ತ್ರ, ಎಂಎ ಅಥವಾ ಎಂಎಸ್‌ಸಿ ಮನೋವಿಜ್ಞಾನ ವಿದ್ಯಾರ್ಹತೆ ಅಗತ್ಯವಿದೆ. ಕಡ್ಡಾಯವಾಗಿ ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ಸರ್ಕಾರದ ಅಧೀನ ಸಂಸ್ಥೆಗಳಲ್ಲಿ ಕನಿಷ್ಠ 3ರಿಂದ 4 ವರ್ಷಗಳ ಅನುಭವ ಹೊಂದಿರುವವರಿಗೆ ಹಾಗೂ ಮಾಜಿ ದೇವದಾಸಿ ಮಹಿಳೆಯರ ಮಕ್ಕಳಿಗೆ ಆದ್ಯತೆ ನೀಡಲಾಗುತ್ತದೆ. ಕಚೇರಿ ಸಹಾಯಕ ಹುದ್ದೆಗೆ 7ನೇ ತರಗತಿ ಉತ್ತೀರ್ಣರಾಗಿರಬೇಕು. ಆಸಕ್ತ ಅಭ್ಯರ್ಥಿಗಳು ತಮ್ಮ ವಿವರವಾದ ಮಾಹಿತಿ ಹಾಗೂ ಮೂಲ ದಾಖಲೆಗಳ ನಕಲು ಪ್ರತಿಗಳೊಂದಿಗೆ ಮೇ 07ರಿಂದ ಮೇ 22, 2026ರ ಸಂಜೆ 5.30 ಗಂಟೆಯೊಳಗೆ ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಜಿಗಳನ್ನು ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗದಗ ಅಥವಾ ದೇವದಾಸಿ ಪುನರ್ವಸತಿ ಯೋಜನೆ, ವಿಶ್ವೇಶ್ವರಯ್ಯ ನಗರ, ಕಳಸಾಪುರ ರಸ್ತೆ, ಶ್ರೀ ಸಾಯಿ ಯೋಗಾಶ್ರಮ ಹತ್ತಿರ, ಗದಗ ವಿಳಾಸಕ್ಕೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08372–452099 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಕಸಾಪ ವತಿಯಿಂದ ವಸ್ತ್ರದ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಡಾ. ರಾಜೇಂದ್ರ ಗಡಾದ**

# ಮಕ್ಕಳ ಸಾಹಿತ್ಯ ನಿರ್ಲಕ್ಷ್ಯ ಸಲ್ಲದು

■ವಿಜಯಸಾಕ್ಷಿ ಸುದ್ದಿ, ಗದಗ

"ಮಕ್ಕಳ ಮನೋವಿಕಾಸಕ್ಕೆ ಸಾಹಿತ್ಯ ಪೂರಕವಾಗಿದೆ. ಕತೆ, ಹಾಡುಗಳ ಮೂಲಕ ಮಕ್ಕಳ ಕಲಿಕೆ ಮನೆಯಿಂದಲೇ ಆರಂಭವಾಗುತ್ತಿತ್ತು. ಮಕ್ಕಳ ಸಾಹಿತ್ಯದ ಮಹತ್ವ ಅರಿತು ಅನೇಕ ಹಿರಿಯ ಸಾಹಿತಿಗಳು ಕೃತಿಗಳನ್ನು ರಚಿಸಿದ್ದಾರೆ. ಆದರೆ, ಇಂದಿನ ದಿನಗಳಲ್ಲಿ ಮಕ್ಕಳ ಸಾಹಿತ್ಯ ನಿರ್ಲಕ್ಷ್ಯಕ್ಕೆ ಒಳಗಾಗಿದೆ" ಎಂದು ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ರಾಜೇಂದ್ರ ಗಡಾದ ಹೇಳಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದಲ್ಲಿರುವ ಕಸಾಪ ಕಾರ್ಯಾಲಯದಲ್ಲಿ ಶಿಕ್ಷಕ ದಂಪತಿಗಳಾದ ಅನ್ನಪೂರ್ಣದೇವಿ ಹಾಗೂ ಸಿದ್ಧಲಿಂಗಯ್ಯ ವಸ್ತ್ರದ ಅವರ ಸ್ಮರಣಾರ್ಥ ಹಮ್ಮಿಕೊಂಡಿದ್ದ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಶಿಕ್ಷಕರು ಮಕ್ಕಳೊಂದಿಗೆ ನಿರಂತರ ಸಂಪರ್ಕ ಹೊಂದಿರುವುದರಿಂದ ಅವರ ಅಭಿರುಚಿ ಮತ್ತು ಆಸಕ್ತಿಗೆ ತಕ್ಕಂತೆ ಸಾಹಿತ್ಯ ರಚಿಸಿ ಜೀವನ ಮೌಲ್ಯಗಳನ್ನು ಬಿಂಬಿಸುವ ಕಾರ್ಯವನ್ನು ಮಾಡುತ್ತಿದ್ದಾರೆ. ಜಿಲ್ಲೆಯ ಅನೇಕ ಕವಿಗಳು ಮಕ್ಕಳ ಸಾಹಿತ್ಯಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ಸ್ಮರಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಮನೆ, ಶಾಲೆ ಹಾಗೂ ಸಮಾಜವು ಮಕ್ಕಳ ಸರ್ವಾಂಗೀಣ ವಿಕಾಸಕ್ಕೆ ಅಗತ್ಯವಾದ ವಾತಾವರಣವನ್ನು ಸಮರ್ಪಕವಾಗಿ ಕಲ್ಪಿಸಿಲ್ಲ. ಮಕ್ಕಳ ಸಾಹಿತ್ಯವನ್ನು ಪ್ರೋತ್ಸಾಹಿಸಲು ಸರ್ಕಾರ ಪೂರಕ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದರು. ಮಕ್ಕಳ ಸಾಹಿತ್ಯ ಸಮ್ಮೇಳನಗಳ ಆಯೋಜನೆಯ ಮೂಲಕ ಮಕ್ಕಳ ಪ್ರತಿಭೆ ಅನಾವರಣಕ್ಕೆ ವೇದಿಕೆ ಕಲ್ಪಿಸಲಾಗುತ್ತದೆ ಎಂದು ಹೇಳಿದರು. ಶಿಕ್ಷಕ ಸಾಹಿತಿ ಡಾ. ರಾಮಚಂದ್ರ ಹಂಸನೂರ ಮಾತನಾಡಿ, ದೇಶದ ಅಭಿವೃದ್ಧಿಯಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದು. ಪಠ್ಯ ಕಲಿಕೆಯ ಜೊತೆಗೆ ಸಾಹಿತ್ಯಿಕ ಚಟುವಟಿಕೆಗಳಲ್ಲಿ ಮಕ್ಕಳನ್ನು ತೊಡಗಿಸುವ ಮೂಲಕ ಅವರ ಸೃಜನಶೀಲತೆಯನ್ನು ವಿಕಾಸಗೊಳಿಸಬೇಕು ಎಂದು ತಿಳಿಸಿದರು. ಚೆನ್ನಮ್ಮ ವಸ್ತ್ರದ ವೇದಿಕೆಯಲ್ಲಿ ಉಪಸ್ಥಿತರಿದ್ದರು. ರಕ್ಷಿತಾ ಗಿಡ್ನಂದಿ ಕಾರ್ಯಕ್ರಮ ನಿರೂಪಿಸಿದರು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ರಾಹುಲ ಗಿಡ್ನಂದಿ ವಂದಿಸಿದರು. ಕಾರ್ಯಕ್ರಮದಲ್ಲಿ ಕೆ.ಎಚ್. ಬೇಲೂರ, ಅನ್ನದಾನಿ ಹಿರೇಮಠ, ಸಿ.ಕೆ.ಎಚ್. ಕಡಣಿ ಶಾಸ್ತ್ರಿ, ಅಂದಾನೆಪ್ಪ ವಿಭೂತಿ, ಕ್ಷಮಾ ವಸ್ತ್ರದ, ವಿನಯ ವಸ್ತ್ರದ, ಬಸವರಾಜ ಗಿರಿತಿಮ್ಮಣ್ಣವರ, ಬಿ.ಬಿ. ಹೊಳಗುಂದಿ, ಸಿ.ಎಂ. ಮಾರನಬಸರಿ, ಎಂ.ಎಫ್. ಡೋಣಿ, ರತ್ನಕ್ಕ ಪಾಟೀಲ, ಭಾರತಿ ಕೋಟಿ, ಮೋಹನ ಕೋಟಿ, ಎಸ್.ಯು. ಸಜ್ಜನಶೆಟ್ಟರ, ರಶ್ಮಿ ಅಂಗಡಿ, ಈರಣ್ಣ ಮಣಕವಾಡ, ಅಶೋಕ ಸತ್ಯರೆಡ್ಡಿ, ಅಶೋಕ ಬರಗುಂಡಿ, ಬೂದೇಶ ಮಜ್ಜಿಗುಡ್ಡ ಡಿ.ಜಿ. ಕುಲಕರ್ಣಿ, ಎಸ್.ಪಿ. ಹೊಂಬಳ, ಜೆ.ಎ. ಪಾಟೀಲ, ರೇಣುಕಾ ಹಂಸನೂರ, ಕಿರಣ ಬಡಿಗೇರ, ಬಸವರಾಜ ವಾರಿ, ಸಮರ್ಥ ಹಂಸನೂರ, ಶೇಖಣ್ಣ ಕಳಸಾಪೂರ, ಬೂದಪ್ಪ ಅಂಗಡಿ, ಮಾಲತೇಶಗೌಡ ಪಾಟೀಲ, ಅನಂತ ಮೋಹನ ಭಟ್, ಶಶಿಧರ ರೇಶ್ಮೆ ಹಾಗೂ ಶಿವಾಜಿ ಕಾಂಬಳೇಕರ ಉಪಸ್ಥಿತರಿದ್ದರು.

> ಸಿದ್ಧಲಿಂಗಯ್ಯ ಹಾಗೂ ಅನ್ನಪೂರ್ಣದೇವಿ ವಸ್ತ್ರದ ದಂಪತಿಗಳು ಶಿಸ್ತು ಮತ್ತು ಸಮಯಪ್ರಜ್ಞೆಗೆ ಮಾದರಿಯಾಗಿದ್ದರು. ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಯನ್ನೇ ಗುರಿಯಾಗಿಸಿಕೊಂಡು ಸಾವಿರಾರು ವಿದ್ಯಾರ್ಥಿಗಳ ಬದುಕು ರೂಪಿಸಿದವರು.
>
> –ಚಂದ್ರಶೇಖರ ವಸ್ತ್ರದ

**ಅಭಿವೃದ್ಧಿ ಕಾರ್ಯಗಳು, ಗ್ಯಾರಂಟಿ ಯೋಜನೆಗಳಿಂದ ದಾವಣಗೆರೆ ದಕ್ಷಿಣ-ಬಾಗಲಕೋಟೆಯಲ್ಲಿ ಕಾಂಗ್ರೆಸ್ ಗೆಲುವು- ಅಶೋಕ ಮಂದಾಲಿ**

# ಜನಪರ ಯೋಜನೆಗಳಿಗೆ ಜನಾಶೀರ್ವಾದ

■ವಿಜಯಸಾಕ್ಷಿ ಸುದ್ದಿ, ಗದಗ



"ರಾಜ್ಯ ಕಾಂಗ್ರೆಸ್ ಸರ್ಕಾರದ ಜನಪರ ಆಡಳಿತ, ಗ್ಯಾರಂಟಿ ಯೋಜನೆಗಳು ಹಾಗೂ ಅಭಿವೃದ್ಧಿಪರ ಕಾರ್ಯಕ್ರಮಗಳ ಫಲವಾಗಿ ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ಕಾಂಗ್ರೆಸ್ ಭರ್ಜರಿ ಗೆಲುವು ಸಾಧಿಸಿದೆ" ಎಂದು ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಹಾಗೂ ಗದಗ ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಅಭಿವೃದ್ಧಿಪರ ಯೋಜನೆಗಳ ಮೂಲಕ ಮೂಲಭೂತ ಸೌಕರ್ಯಗಳನ್ನು ಒದಗಿಸಿ, ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿರುವುದರಿಂದ ಕಾಂಗ್ರೆಸ್ ಸರ್ಕಾರ ಕನ್ನಡಿಗರ ಮನ ಗೆದ್ದಿದೆ ಎಂದು ಹೇಳಿದ್ದಾರೆ.

2023ರ ಚುನಾವಣೆಯಲ್ಲಿ ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಕಾಂಗ್ರೆಸ್ 27,888 ಮತಗಳ ಅಂತರದಿಂದ ಜಯಗಳಿಸಿತ್ತು. 2026ರ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ ಶಾಮನೂರು 69,578 ಮತಗಳನ್ನು ಪಡೆದು, ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ವಿರುದ್ಧ 5,708 ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ.

ದಾವಣಗೆರೆ ದಕ್ಷಿಣದಲ್ಲಿ ಮುಸ್ಲಿಂ ನಾಯಕರ ಅಸಮಾಧಾನದಿಂದ ಕಾಂಗ್ರೆಸ್‌ಗೆ ಹಿನ್ನಡೆ ಆಗಬಹುದೆಂಬ ಊಹೆ ಸುಳ್ಳಾಗಿದೆ. ಶಾಮನೂರು ಕುಟುಂಬದ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿದ ಮತದಾರರು ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲ ನೀಡಿದ್ದಾರೆ ಎಂದು ತಿಳಿಸಿದ್ದಾರೆ.

> ಜನರ ವಿಶ್ವಾಸ ಗಳಿಸಿದ ಅಭಿವೃದ್ಧಿಪರ ಆಡಳಿತ ಮತ್ತು ಗ್ಯಾರಂಟಿ ಯೋಜನೆಗಳ ಫಲವಾಗಿ ಉಪಚುನಾವಣೆಯಲ್ಲಿ ಕಾಂಗ್ರೆಸ್ ಭರ್ಜರಿ ಗೆಲುವು ಸಾಧಿಸಿದೆ.
>
> – **ಅಶೋಕ ಮಂದಾಲಿ**, ಪ್ರಚಾರ ಸಮಿತಿ ಜಿಲ್ಲಾ ಅಧ್ಯಕ್ಷರು

2023ರ ಚುನಾವಣೆಯಲ್ಲಿ ಕೇವಲ 1,311 ಮತಗಳನ್ನು ಪಡೆದಿದ್ದ ಎಸ್‌ಡಿಪಿಐ ಪಕ್ಷವು ಈ ಬಾರಿ 18,975 ಮತಗಳನ್ನು ಪಡೆದಿರುವುದರಿಂದ ಕಾಂಗ್ರೆಸ್ ಗೆಲುವಿನ ಅಂತರ ಕಡಿಮೆಯಾಗಿದೆ ಎಂದು ವಿಶ್ಲೇಷಿಸಿದ್ದಾರೆ.

ಬಾಗಲಕೋಟೆ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ ಮೇಟಿ 98,919 ಮತಗಳನ್ನು ಪಡೆದು, ಬಿಜೆಪಿ ಅಭ್ಯರ್ಥಿ ವೀರಭದ್ರಯ್ಯ ಚರಂತಿಮಠ ವಿರುದ್ಧ 22,332 ಮತಗಳ ಭಾರೀ ಅಂತರದಿಂದ ಜಯಗಳಿಸಿದ್ದಾರೆ. 1952ರ ಬಳಿಕ ಕ್ಷೇತ್ರದ ಇತಿಹಾಸದಲ್ಲೇ ಇದು ಕಾಂಗ್ರೆಸ್ ದಾಖಲಿಸಿದ ಅತಿ ದೊಡ್ಡ ಅಂತರದ ಗೆಲುವಾಗಿದೆ ಎಂದು ಹೇಳಿದ್ದಾರೆ.

2024 ಮತ್ತು 2026ರಲ್ಲಿ ನಡೆದ ಉಪಚುನಾವಣೆಗಳಲ್ಲೂ ಕಾಂಗ್ರೆಸ್ ನಿರಂತರ ಗೆಲುವು ಸಾಧಿಸಿದೆ. ಶೋರಾಪೂರ, ಶಿಗ್ಗಾಂವಿ, ಸಂಡೂರು ಹಾಗೂ ಚನ್ನಪಟ್ಟಣ ಕ್ಷೇತ್ರಗಳ ಉಪಚುನಾವಣೆಯಲ್ಲೂ ಕಾಂಗ್ರೆಸ್ ಗೆಲುವು ದಾಖಲಿಸಿರುವುದನ್ನು ಉಲ್ಲೇಖಿಸಿದ್ದಾರೆ.

2013–18ರ ಅವಧಿಯಲ್ಲಿ ಕಾಂಗ್ರೆಸ್ ಸರ್ಕಾರ ಎಸ್‌ಸಿ/ಎಸ್‌ಟಿ ಉಪಯೋಜನೆಗಳಿಗೆ ರಾಜ್ಯ ಬಜೆಟ್‌ನ ಶೇ. 24ರಷ್ಟು ಮೀಸಲಾತಿ ಜಾರಿಗೊಳಿಸಿತ್ತು. ಗ್ರಾಮೀಣ ರಸ್ತೆ ಅಭಿವೃದ್ಧಿ, ಆಶ್ರಯ ಯೋಜನೆ, ಸ್ಲಂ ಬೋರ್ಡ್ ಮೂಲಕ ಮನೆ ನಿರ್ಮಾಣ, ಜಿಲ್ಲಾ ಆಸ್ಪತ್ರೆ ನವೀಕರಣ, ತುಂಗಭದ್ರಾ ನೀರಾವರಿ ಯೋಜನೆಗಳ ವಿಸ್ತರಣೆ ಮೂಲಕ ರೈತರ ಆದಾಯ ಹೆಚ್ಚಳಕ್ಕೆ ಕ್ರಮ ಕೈಗೊಳ್ಳಲಾಗಿತ್ತು ಎಂದು ತಿಳಿಸಿದ್ದಾರೆ.

ದಾವಣಗೆರೆ ಜಿಲ್ಲೆಗೆ 2025ರಲ್ಲಿ ರೂ. 1,350 ಕೋಟಿ ಅಭಿವೃದ್ಧಿ ಯೋಜನೆಗಳನ್ನು ಘೋಷಿಸಲಾಗಿತ್ತು. ಹೊನ್ನಾಳಿ ತಾಲೂಕಿನಲ್ಲಿ ಕೋಲ್ಡ್ ಸ್ಟೋರೇಜ್ ಯೋಜನೆ, ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯ, ಚನ್ನಗಿರಿ ತಾಲೂಕಿನ ಕೆರೆ ತುಂಬಿಸುವ ಯೋಜನೆಗಳಿಗೆ ಅನುದಾನ ನೀಡಲಾಗಿದೆ ಎಂದು ಹೇಳಿದ್ದಾರೆ.

ಬಾಗಲಕೋಟೆಯಲ್ಲಿ ರೂ. 425 ಕೋಟಿ ವೆಚ್ಚದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಹಾಗೂ ಸಂಶೋಧನಾ ಸಂಸ್ಥೆ ಸ್ಥಾಪನೆ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಟ್ರಾಮಾ ಕೇರ್ ಸೆಂಟರ್ ನಿರ್ಮಾಣ ಸೇರಿದಂತೆ ಹಲವು ಯೋಜನೆಗಳನ್ನು ಕೈಗೊಳ್ಳಲಾಗಿದೆ ಎಂದು ಅಶೋಕ ಮಂದಾಲಿ ತಿಳಿಸಿದ್ದಾರೆ.

ಗೃಹಲಕ್ಷ್ಮಿ ಮತ್ತು ಶಕ್ತಿ ಯೋಜನೆಗಳ ಪರಿಣಾಮವಾಗಿ ಮಹಿಳಾ ಮತದಾರರ ಒಲವು ಕಾಂಗ್ರೆಸ್ ಪರ ಹೆಚ್ಚಿದ್ದು, ಉಪಚುನಾವಣೆಯಲ್ಲಿ ಗೆಲುವಿನ ಅಂತರ ಹೆಚ್ಚಲು ಕಾರಣವಾಗಿದೆ ಎಂದು ಪ್ರಚಾರ ಸಮಿತಿಯ ಜಿಲ್ಲಾ ಅಧ್ಯಕ್ಷ ಅಶೋಕ ಮಂದಾಲಿ ಹೇಳಿದ್ದಾರೆ.

**ಮೃತರ ಕುಟುಂಬಕ್ಕೆ ಪರಿಹಾರ ಹಾಗೂ ಉದ್ಯೋಗ ನೀಡಲು ಪಿಡಿಒ, ಆರ್.ಡಿ.ಪಿ.ಆರ್ ಸಂಘಗಳ ಮನವಿ**

# ಪಿಡಿಒ ಆತ್ಮಹತ್ಯೆ ಪ್ರಕರಣ ಸಮಗ್ರ ತನಿಖೆ ಮಾಡಿ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ರೋಣ ತಾಲೂಕಿನ ಅಸೂಟಿ ಗ್ರಾಮ ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಪಿಡಿಒ ಮುಕ್ತುಮ್ ಹುಸೇನ ಅವರ ಆತ್ಮಹತ್ಯೆ ಪ್ರಕರಣವನ್ನು ಸಮಗ್ರ ಹಾಗೂ ನಿಷ್ಪಕ್ಷಪಾತವಾಗಿ ತನಿಖೆ ನಡೆಸಬೇಕು ಎಂದು ಆಗ್ರಹಿಸಿ ರಾಜ್ಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ (ಕಆಔ) ಸಂಘದ ಸದಸ್ಯರು ಹಾಗೂ ಆರ್.ಡಿ.ಪಿ.ಆರ್ ವೃಂದ ಸಂಘಗಳ ಪದಾಧಿಕಾರಿಗಳು ಮಾನ್ಯ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಂಘದ ಜಿಲ್ಲಾ ಅಧ್ಯಕ್ಷರಾದ ರಿಯಾಜ್ ಕೆ. ಮಾತನಾಡಿ, ಪಿಡಿಒಗಳ ಮೇಲೆ ದಿನದಿಂದ ದಿನಕ್ಕೆ ಕೆಲಸದ ಒತ್ತಡ ಹೆಚ್ಚುತ್ತಿದ್ದು, ಮೇಲಾಧಿಕಾರಿಗಳ ಅನಾವಶ್ಯಕ ಹಸ್ತಕ್ಷೇಪ ಹಾಗೂ ಆಡಳಿತಾತ್ಮಕ ಒತ್ತಡದಿಂದ ಅಧಿಕಾರಿಗಳು ಮಾನಸಿಕವಾಗಿ ಕುಗ್ಗುತ್ತಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು.

ಘಟನೆಗೆ ಕಾರಣರಾದವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಮೃತರ ಕುಟುಂಬಕ್ಕೆ ತಕ್ಷಣ ನ್ಯಾಯ ಒದಗಿಸಿ ಸಮರ್ಪಕ ಪರಿಹಾರ ಧನ ನೀಡಬೇಕು. ಜೊತೆಗೆ ಕುಟುಂಬದ ಒಬ್ಬರಿಗೆ ಸರ್ಕಾರಿ ಉದ್ಯೋಗ ನೀಡುವ ಮೂಲಕ ಆರ್ಥಿಕ ಭದ್ರತೆ ಕಲ್ಪಿಸಬೇಕು ಎಂದು ಮನವಿ ಮಾಡಿದರು.

ಪಿಡಿಒಗಳ ಮೇಲೆ ಇರುವ ಅತಿಯಾದ ಕೆಲಸದ ಒತ್ತಡವನ್ನು ಕಡಿಮೆ ಮಾಡುವ ಕ್ರಮಗಳನ್ನು ಸರ್ಕಾರ ಜಾರಿಗೆ ತರಬೇಕು. ಕೆಲಸದ ಸಮಯ, ಹೊಣೆಗಾರಿಕೆ ಹಾಗೂ ಆಡಳಿತಾತ್ಮಕ ನಿಯಮಗಳಿಗೆ ಸ್ಪಷ್ಟ ಮಾರ್ಗಸೂಚಿಗಳನ್ನು ರೂಪಿಸಬೇಕು. ಜೊತೆಗೆ ಪಿಡಿಒಗಳಿಗೆ ಭದ್ರತೆ ಹಾಗೂ ಮಾನಸಿಕ ಬೆಂಬಲ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಪಿಡಿಒಗಳ ಸೇವಾ ಪರಿಸ್ಥಿತಿಯನ್ನು ಸುಧಾರಿಸಲು ಸರ್ಕಾರ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ ಅವರು, ನ್ಯಾಯಕ್ಕಾಗಿ ಹೋರಾಟ ಮುಂದುವರಿಸುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ವಿವಿಧ ತಾಲೂಕುಗಳಿಂದ ಆಗಮಿಸಿದ್ದ ಪಿಡಿಒಗಳು, ಕಾರ್ಯದರ್ಶಿಗಳು, ಡಾಟಾ ಎಂಟ್ರಿ ಆಪರೇಟರ್‌ಗಳು, ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಹಾಜರಿದ್ದರು.

> "ಪಿಡಿಒಗಳ ಮೇಲೆ ನಿರಂತರವಾಗಿ ಹೆಚ್ಚುತ್ತಿರುವ ಆಡಳಿತಾತ್ಮಕ ಒತ್ತಡ ಮತ್ತು ಮೇಲಾಧಿಕಾರಿಗಳ ಹಸ್ತಕ್ಷೇಪದಿಂದ ಅಧಿಕಾರಿಗಳು ಮಾನಸಿಕವಾಗಿ ಕುಗ್ಗುತ್ತಿದ್ದಾರೆ. ಇದೇ ರೀತಿಯ ಒತ್ತಡಗಳು ಮುಕ್ತುಮ್ ಹುಸೇನ ಅವರ ಆತ್ಮಹತ್ಯೆಗೆ ಕಾರಣವಾಗಿರಬಹುದೆಂಬ ಅನುಮಾನವಿದೆ. ಸರ್ಕಾರ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಸಮಗ್ರ ತನಿಖೆ ನಡೆಸಬೇಕು."
>
> – ರಿಯಾಜ್ ಕೆ., ಜಿಲ್ಲಾ ಅಧ್ಯಕ್ಷರು, ರಾಜ್ಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಸಂಘ


**ಯಡಿಯೂರಪ್ಪ ಅಭಿಮಾನೋತ್ಸವ ಯಶಸ್ವಿಗೆ ಬಿಜೆಪಿ ಕಾರ್ಯಕರ್ತರಿಗೆ ಆಹ್ವಾನ**

# ಬಿ.ಎಸ್. ಯಡಿಯೂರಪ್ಪ ಅಭಿಮಾನೋತ್ಸವಕ್ಕೆ ಬಿಜೆಪಿ ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಕ್ಷದ ಗದಗ ಜಿಲ್ಲಾ ಕಾರ್ಯಾಲಯದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಸಕ್ರಿಯ ರಾಜಕೀಯ ಜೀವನದ ಸಾರ್ಥಕ 50 ವರ್ಷಗಳ ಅಂಗವಾಗಿ ಮೇ 9ರಂದು ಚಿತ್ರದುರ್ಗದಲ್ಲಿ ನಡೆಯಲಿರುವ "ಅಭಿಮಾನೋತ್ಸವ" ಕಾರ್ಯಕ್ರಮದ ಕುರಿತು ಪೂರ್ವಭಾವಿ ಸಭೆ ನಡೆಯಿತು.

"ರೈತ ಸುಖವಾಗಿದ್ದರೆ ದೇಶ ಸುಭಿಕ್ಷ" ಎಂಬ ಧ್ಯೇಯವಾಕ್ಯಕ್ಕೆ ಜೀವ ತುಂಬಿದ ರೈತಬಂಧು ಬಿ.ಎಸ್. ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಗದಗ ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಭಾಗವಹಿಸಬೇಕೆಂದು ಸಭೆಯಲ್ಲಿ ಕರೆ ನೀಡಲಾಯಿತು.




ಸಭೆಯಲ್ಲಿ ಶಾಸಕ ಹಾಗೂ ಮಾಜಿ ಸಚಿವ ಸಿ.ಸಿ. ಪಾಟೀಲ, ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಲಿಂಗರಾಜ ಪಾಟೀಲ ಹಾಗೂ ಎಂ.ಎಸ್. ಕರೀಗೌಡ್ರ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ನಿರ್ಮಲಾ ಕೊಳ್ಳಿ, ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಗದಗ ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ, ಒಬಿಸಿ ಮೋರ್ಚಾ ರಾಜ್ಯ ಕಾರ್ಯದರ್ಶಿ ಸುಧೀರ ಕಾಟಿಗರ, ಎಸ್.ಸಿ. ಮೋರ್ಚಾ ಜಿಲ್ಲಾಧ್ಯಕ್ಷ ಮಂಜುನಾಥ ಮುಳಗುಂದ, ಬಿಎಸ್ ಚಿಂಚಲಿ, ವಸಂತ ಮೇಟಿ, ಪ್ರದೀಪ ನವಲಗುಂದ, ಸುರೇಶ ಚಿತ್ತರಗಿ, ಅನೀಲ ಅಬ್ಬಿಗೇರಿ, ಉಮೇಶಗೌಡ ಪಾಟೀಲ, ಶಿವು ಹಿರೇಮನಿಪಾಟೀಲ, ಪ್ರಶಾಂತ ನಾಯ್ಕರ, ಮುತ್ತು ಮುಶಿಗೇರಿ, ಅಶೋಕ ಸಂಕಣ್ಣವರ, ಮಾಂತೇಶ ನಲವಡಿ, ನಾಗರಾಜ ತಳವಾರ, ಮಹೇಶ ದಾಸರ, ಮಂಜುನಾಥ ಶಾಂತಗೇರಿ, ಸುರೇಶ ಹೆಬಸೂರ, ಕುಮಾರ ಮಾರನಬಸರಿ, ಶಂಕರ ಕರಿಬಿಷ್ಟಿ, ಬಸವರಾಜ ನರೆಗಲ್, ವಸಂತ ಹಬೀಬ, ಶಾರದಾ ಸಜ್ಜನರ, ಸ್ವಾತಿ ಅಕ್ಕಿ, ಪುಷ್ಪಾ ಪೂಜಾರ, ರೇಖಾ ಗವಳಿ, ರವಿ ಮಾನ್ವಿ, ವಿನೋದ ಹಂಸನೂರ ಸೇರಿದಂತೆ ಹಲವರು ಭಾಗವಹಿಸಿದ್ದರು.

ಕಾರ್ಯಕ್ರಮವನ್ನು ರಮೇಶ ಸಜ್ಜಗಾರ ನಿರೂಪಿಸಿದರು. ಶಂಕರ ಕಾಕಿ ವಂದಿಸಿದರು.

# ಬಿಜೆಪಿ ಮುಖಂಡ ಜಗದೀಶ್ ಹಿರೇಮನಿ ನಿಧನಕ್ಕೆ ಶ್ರದ್ಧಾಂಜಲಿ

■ವಿಜಯಸಾಕ್ಷಿ ಸುದ್ದಿ, ಗದಗ



ಭಾರತೀಯ ಜನತಾ ಪಕ್ಷದ ರಾಜ್ಯ ಮಟ್ಟದ ಮುಖಂಡರು ಹಾಗೂ ನಿಷ್ಠಾವಂತ ಕಾರ್ಯಕರ್ತರಾಗಿದ್ದ ಜಗದೀಶ್ ಹಿರೇಮನಿ ಅವರ ನಿಧನಕ್ಕೆ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಮೌನಾಚರಣೆ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಜಗದೀಶ್ ಹಿರೇಮನಿ ಅವರು ಅನೇಕ ವರ್ಷಗಳಿಂದ ಪಕ್ಷದಲ್ಲಿ ಸಕ್ರಿಯವಾಗಿ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿ ಸಂಘಟನೆ ಬಲವರ್ಧನೆಗೆ ಸೇವೆ ಸಲ್ಲಿಸಿದ್ದರು. ಎಬಿವಿಪಿ ಪೂರ್ಣಾವಧಿ ಕಾರ್ಯಕರ್ತರಾಗಿ, ಬಿಜೆಪಿ ರಾಜ್ಯ ಕಾರ್ಯದರ್ಶಿಯಾಗಿ, ಕೇಂದ್ರ ಸಫಾಯಿ ಕರ್ಮಚಾರಿ ಆಯೋಗದ ಸದಸ್ಯರಾಗಿ ಸೇವೆ ಸಲ್ಲಿಸಿದ್ದ ಅವರು, ಇತ್ತೀಚೆಗೆ ವಿಶೇಷ ತೀವ್ರ ಪರಿಷ್ಕರಣೆ ಜಾಗೃತಿ ಅಭಿಯಾನದ ರಾಜ್ಯ ಸಂಚಾಲಕರಾಗಿಯೂ ಕಾರ್ಯನಿರ್ವಹಿಸುತ್ತಿದ್ದರು.

ಈ ಸಂದರ್ಭದಲ್ಲಿ ಶಾಸಕ ಹಾಗೂ ಮಾಜಿ ಸಚಿವ ಸಿ.ಸಿ. ಪಾಟೀಲ, ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಲಿಂಗರಾಜ ಪಾಟೀಲ ಹಾಗೂ ಎಂ.ಎಸ್. ಕರೀಗೌಡ್ರ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ನಿರ್ಮಲಾ ಕೊಳ್ಳಿ, ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಗದಗ ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ ಸೇರಿದಂತೆ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ, ಒಬಿಸಿ ಮೋರ್ಚಾ ರಾಜ್ಯ ಕಾರ್ಯದರ್ಶಿ ಸುಧೀರ ಕಾಟಿಗರ, ಎಸ್.ಸಿ. ಮೋರ್ಚಾ ಜಿಲ್ಲಾಧ್ಯಕ್ಷ ಮಂಜುನಾಥ ಮುಳಗುಂದ, ಬಿಎಸ್ ಚಿಂಚಲಿ, ವಸಂತ ಮೇಟಿ, ಪ್ರದೀಪ ನವಲಗುಂದ, ಶಂಕರ ಕಾಕಿ, ಸುರೇಶ ಚಿತ್ತರಗಿ, ಅನೀಲ ಅಬ್ಬಿಗೇರಿ, ಉಮೇಶಗೌಡ ಪಾಟೀಲ, ಶಿವು ಹಿರೇಮನಿಪಾಟೀಲ, ಪ್ರಶಾಂತ ನಾಯ್ಕರ, ಮುತ್ತು ಮುಶಿಗೇರಿ, ಅಶೋಕ ಸಂಕಣ್ಣವರ, ಮಾಂತೇಶ ನಲವಡಿ, ನಾಗರಾಜ ತಳವಾರ, ಮಹೇಶ ದಾಸರ, ಸುರೇಶ ಹೆಬಸೂರ, ಕುಮಾರ ಮಾರನಬಸರಿ, ಶಂಕರ ಕರಿಬಿಷ್ಟಿ, ಬಸವರಾಜ ನರೆಗಲ್, ವಸಂತ ಹಬೀಬ, ಶಾರದಾ ಸಜ್ಜನರ, ಸ್ವಾತಿ ಅಕ್ಕಿ, ಪುಷ್ಪಾ ಪೂಜಾರ, ರೇಖಾ ಗವಳಿ, ರವಿ ಮಾನ್ವಿ, ವಿನೋದ ಹಂಸನೂರ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

# ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಆರ್ಥಿಕ ಸಂಕಷ್ಟದಲ್ಲಿರುವ ಪ್ರತಿಭಾನ್ವಿತ ವಿದ್ಯಾರ್ಥಿಗಳು 10ನೇ ತರಗತಿಯ ನಂತರ ಶಿಕ್ಷಣ ಮುಂದುವರಿಸಲು ಧಾರವಾಡದ ವಿದ್ಯಾಪೋಷಕ ಸಂಸ್ಥೆಯು "ನರ್ಚರ್ ಮೆರಿಟ್" ಯೋಜನೆಯಡಿ 2026–27ನೇ ಶೈಕ್ಷಣಿಕ ಸಾಲಿಗೆ ಆರ್ಥಿಕ ನೆರವು ನೀಡಲು ಮುಂದಾಗಿದೆ.

ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಮಾರ್ಚ್ 2026ರಲ್ಲಿ ಪ್ರಥಮ ಬಾರಿಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆದು ಮೊದಲ ಪ್ರಯತ್ನದಲ್ಲೇ ಕನಿಷ್ಠ ಶೇ. 80 ಅಂಕ ಗಳಿಸಿರಬೇಕು. ಪಿಯುಸಿ ಪ್ರಥಮ ವರ್ಷದ ವಾಣಿಜ್ಯ ಹಾಗೂ ಡಿಪ್ಲೋಮಾ ಕೋರ್ಸ್‌ಗೆ ಸೇರ್ಪಡೆಯಾಗಲು ಬಯಸುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು.

ವಿದ್ಯಾರ್ಥಿಗಳ ಕುಟುಂಬದ ಮಾಸಿಕ ಆದಾಯ ರೂ. 10,000ಕ್ಕಿಂತ ಕಡಿಮೆ ಇರಬೇಕು. ಜೊತೆಗೆ ವಿದ್ಯಾರ್ಥಿಗಳ ಪೋಷಕರು ಧಾರವಾಡ, ಗದಗ, ಹಾವೇರಿ, ಬೆಳಗಾವಿ, ಉತ್ತರ ಕನ್ನಡ, ಶಿವಮೊಗ್ಗ, ವಿಜಯಪುರ, ಬಾಗಲಕೋಟೆ, ದಾವಣಗೆರೆ ಹಾಗೂ ಕುಷ್ಟಗಿ ಜಿಲ್ಲೆಗಳಲ್ಲಿ ವಾಸವಾಗಿರಬೇಕು.

ಧನಸಹಾಯಕ್ಕಾಗಿ ಅರ್ಜಿಯನ್ನು ಸಂಸ್ಥೆಯ ವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮೂಲಕ ಸಲ್ಲಿಸಬೇಕು. ಅರ್ಜಿಯಲ್ಲಿ ಅಗತ್ಯ ಮಾಹಿತಿಯನ್ನು ಭರ್ತಿ ಮಾಡಿ ದಾಖಲೆಗಳನ್ನು ಅಪ್‌ಲೋಡ್ ಮಾಡಬೇಕಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಮೇ 30, 2026 ಆಗಿದೆ.

ಹೆಚ್ಚಿನ ಮಾಹಿತಿಗಾಗಿ ವಿದ್ಯಾಪೋಷಕ ಸಂಸ್ಥೆ, ನಂ. 307/4ಎ1, ನಗರಕರ ಕಾಲೋನಿ, ಮಹಿಷಿ ರಸ್ತೆ, ಮಾಳಮಡ್ಡಿ, ಧಾರವಾಡ ಕಚೇರಿಯನ್ನು ಅಥವಾ ದೂರವಾಣಿ ಸಂಖ್ಯೆ 0836–2747357 / 9513322355 ಸಂಪರ್ಕಿಸಬಹುದು.

ಗದಗ ಜಿಲ್ಲೆಯ ವಿದ್ಯಾರ್ಥಿಗಳು ಡಾ. ಎಸ್.ಬಿ. ಸಜ್ಜನರ (9945555084), ಡಾ. ಪ್ರಭು ಗಂಜಿಹಾಳ (9448775346), ಡಾ. ಪ್ರಕಾಶ ಕಣವಿ (9449121688), ಪ್ರೊ. ಮಂಜುನಾಥ ಹೊಳ್ಳಿಯವರ (9886893859) ಹಾಗೂ ವಿಜಯಕುಮಾರ ಸಜ್ಜನರ (8445646911) ಅವರನ್ನು ಸಂಪರ್ಕಿಸಬಹುದಾಗಿದೆ.

# ಮೇ 9ರಿಂದ ಜಿಲ್ಲಾ ಮಕ್ಕಳ ಸಾಹಿತ್ಯ ಸಮ್ಮೇಳನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಎಂ.ಎಸ್. ಹುಲ್ಲೂರ ಎ–1 ಹೈಟೆಕ್ ಕೋಚಿಂಗ್ ಸೆಂಟರ್, ಗದಗ ಇವರ ಸಹಯೋಗದಲ್ಲಿ ಎರಡು ದಿನಗಳ ಜಿಲ್ಲಾ ಮಕ್ಕಳ ಸಾಹಿತ್ಯ ಸಮ್ಮೇಳನವನ್ನು ಮೇ 9 ಮತ್ತು 10, 2026ರಂದು ಗದಗ ನಗರದ ರಾಜೀವಗಾಂಧಿ ನಗರದಲ್ಲಿರುವ ವಿಜಯ ಲಲಿತಕಲಾ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಗಿದೆ.

ಸಮ್ಮೇಳನದಲ್ಲಿ ಮಕ್ಕಳ ಸಾಹಿತಿಗಳ ಸಮಾವೇಶ, ಕವಿಗೋಷ್ಠಿ, ಕಥೆ ರಚನೆ, ಕಾವ್ಯ ರಚನೆ, ಚಿತ್ರ ರಚನೆ, ಕರಕುಶಲ ಕಲೆ, ಭಾಷಾ ಆಟಗಳು ಸೇರಿದಂತೆ ವಿವಿಧ ಪ್ರಾಯೋಗಿಕ ಹಾಗೂ ಸೃಜನಾತ್ಮಕ ಚಟುವಟಿಕೆಗಳು ಜರುಗಲಿವೆ.

ಈ ಚಟುವಟಿಕೆಗಳಲ್ಲಿ ಭಾಗವಹಿಸಲು ಆಸಕ್ತಿಯಿರುವ 10ರಿಂದ 18 ವರ್ಷದೊಳಗಿನ ವಿದ್ಯಾರ್ಥಿಗಳು ತಮ್ಮ ಹೆಸರನ್ನು ಮೊಬೈಲ್ ಸಂಖ್ಯೆ 9845304504, 9483657131, 7338359971 ಹಾಗೂ 7483271920 ಸಂಖ್ಯೆಗಳ ಮೂಲಕ ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka